ಸಂಪುಟ : 8 ಸಂಚಿಕೆ : 156 ಪುಟ : 4 ಬೆಲೆ : 3.00 ರವಿವಾರ ಜುಲೈ 23, 2023 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್ ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 8 Issue : 156 Pages : 4 Price : 3.00 Sunday July 23, 2023 Gadag RNI No: KARKAN/2015/63412 E-mail: vijayasakshidaily@gmail.com Post Regn.No: GDG/72/2023-25

## ಬಸವರಾಜ ಹೊರಟ್ಟಿಯವರಿಗೆ ಮುಖ್ಯಮಂತ್ರಿಗಳಿಂದ ಅಭಿನಂದನೆ



■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

16ನೇ ವಿಧಾನಸಭೆಯ ಮೊದಲ ಅಧಿವೇಶನ ಕಳೆದ 18 ದಿನಗಳಿಂದ ಅತ್ಯಂತ ಯಶಸ್ವಿಯಾಗಿ ನಡೆಸಿದ್ದಕ್ಕೆ ಸಭಾಪತಿ ಬಸವರಾಜ ಹೊರಟ್ಟಿಯವರಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಅಭಿನಂದನೆ ಸಲ್ಲಿಸಿದರು.

ಕೊನೆಯ ದಿನವಾದ ಶುಕ್ರವಾರ ವಿಧಾನ ಪರಿಷತ್ತಿನ ಕೊನೆಯ ದಿನದ ಕಾರ್ಯ ಕಲಾಪಗಳಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಭಾಗವಹಿಸಿ, ಬಜೆಟ್ ಪರ ಸುದೀರ್ಘ ಅಭಿನಂದಾರ್ಹ ಭಾಷಣ ಮಾಡಿದರು. ತದನಂತರ ಸಭಾಪತಿ ಅವರ ಕಚೇರಿಗೆ ಆಗಮಿಸಿ, ಉಪಹಾರ ಸೇವಿಸಿ ಕೆಲ ಸಮಯ ಸಭಾಪತಿಗಳೊಂದಿಗೆ ಚರ್ಚೆ ನಡೆಸಿ, ಕಳೆದ 18 ದಿನಗಳಿಂದ ನಡೆದ ಅಧಿವೇಶನದ ಕುರಿತು ಸುದೀರ್ಘವಾಗಿ ಚರ್ಚಿಸಿದರು. ವಿಧಾನ ಪರಿಷತ್ತಿನ ಕಾರ್ಯಕಲಾಪಗಳನ್ನು ಅತ್ಯಂತ ಸುಗಮವಾಗಿ ನಡೆಸಿದ್ದಕ್ಕೆ ಸಭಾಪತಿ ಬಸವರಾಜ್ ಹೊರಟ್ಟಿ ಅವರಿಗೆ ಅಭಿನಂದಗಳನ್ನು ಸಲ್ಲಿಸಿದರು. ಈ ಸಂದರ್ಭದಲ್ಲಿ ವಿವಿಧ ಇಲಾಖೆಯ ಸಚಿವರು, ಶಾಸಕರು, ವಿಧಾನಸಭಾ, ಸದಸ್ಯರು, ವಿಧಾನ ಪರಿಷತ್ತಿನ ಸದಸ್ಯರು ಉಪಸ್ಥಿತರಿದ್ದರು ಎಂದು ಡಾ.ಬಸವರಾಜ ಧಾರವಾಡ ತಿಳಿಸಿದ್ದಾರೆ.

### ವಿವಿಧ ಠಾಣೆಗಳ ವ್ಯಾಪ್ತಿಯಲ್ಲಿ ವಶಕ್ಕೆ ಪಡೆದಿದ್ದ ದೋಷಪೂರಿತ ಸೈಲೆನ್ಸರ್ ನಾಶಪಡಿಸಿದ ಪೊಲೀಸರು

# ಪಾರ್ಕಿಂಗ್ ವ್ಯವಸ್ಥೆಗೆ ಹೆಚ್ಚಿನ ಆದ್ಯತೆ

■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ವಿವಿಧ ಭಾಗಗಳಲ್ಲಿ ಕರ್ಕಶವಾಗಿ, ಭಯಬೀಳುವಂತೆ ಶಬ್ಧ ಮಾಡುತ್ತ, ಸಾರ್ವಜನಿಕರಿಗೆ ಕಿರಿಕಿರಿ ಹುಟ್ಟಿಸುತ್ತಿದ್ದ ದ್ವಿಚಕ್ರ ವಾಹನಗಳ ದೋಷಪೂರಿತ ಸೈಲೆನ್ಸರ್‌ಗಳನ್ನು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ ಎಸ್ ನೇಮಗೌಡ ಸಮ್ಮುಖದಲ್ಲಿ ಶನಿವಾರ ಪೊಲೀಸರು ನಾಶಪಡಿಸಿದರು.

ಪೊಲೀಸ್ ಇಲಾಖೆಯ ತಪಾಸಣೆಯ ಸಮಯದಲ್ಲಿ ಜಿಲ್ಲೆಯ ವಿವಿಧ ಠಾಣೆಗಳ ವ್ಯಾಪ್ತಿಯಲ್ಲಿ ಪತ್ತೆಯಾದ ದೋಷಪೂರಿತ ಸೈಲೆನ್ಸರ್‌ಗಳನ್ನು ಪೊಲೀಸರು ವಶಕ್ಕೆ ಪಡೆದುಕೊಂಡಿದ್ದರು. ಹೀಗೆ ವಶಪಡಿಸಿಕೊಂಡ ಎಲ್ಲ ಸೈಲೆನ್ಸರ್‌ಗಳನ್ನು ರೋಡ್ ರೋಲರ್ ಮೂಲಕ ಸಂಚಾರ ಪೊಲೀಸ್ ಠಾಣೆಯ ಪಕ್ಕದಲ್ಲಿ ನಾಶ ಮಾಡಲಾಯಿತು.

ಈ ಕಾರ್ಯಾಚರಣೆಯ ಕುರಿತು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ



ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ ಎಸ್ ನೇಮಗೌಡ, ಜಿಲ್ಲೆಯಾದ್ಯಂತ ಸತತ ಮೂರು ದಿನಗಳ ಕಾಲ ವಿಶೇಷ ಕಾರ್ಯಾಚರಣೆ ನಡೆಸಿ, ದ್ವಿಚಕ್ರವಾಹನಗಳ ಗ್ಯಾರೇಜ್, ಅಟೋಮೊಬೈಲ್ ಅಂಗಡಿಗಳಲ್ಲಿನ ದೋಷಪೂರಿತ ಸೈಲೆನ್ಸರ್‌ಗಳನ್ನು ವಶಕ್ಕೆ ಪಡೆಯಲಾಗಿತ್ತು. ಅಲ್ಲದೆ, ಅಪ್ರಾಪ್ತ ವಯಸ್ಸಿನ ವಾಹನ ಚಾಲಕರ ವಿರುದ್ಧವೂ ವಿಶೇಷ ಕಾರ್ಯಾಚರಣೆ ನಡೆಸಲಾಗಿತ್ತು. ಈಲ್ಲೆಯಾದ್ಯಂತ ಒಟ್ಟು 27 ಕಡೆಗಳಲ್ಲಿ ತಪಾಸಣೆ ನಡೆಸಿ, 85 ದೋಷಪೂರಿತ ಸೈಲೆನ್ಸರ್‌ಗಳನ್ನು ಪತ್ತೆ ಮಾಡಲಾಗಿತ್ತು. ಕಾರ್ಯಾಚರಣೆಯ ವೇಳೆ 6 ಅಂಗಡಿಗಳಲ್ಲಿ ಇದ್ದ ದೋಷಪೂರಿತ ಸೈಲೆನ್ಸರ್‌ಗಳೂ ಸೇರಿದಂತೆ ಒಟ್ಟು 91 ಸೈಲೆನ್ಸರ್‌ಗಳನ್ನು ವಶಪಕ್ಕೆ ಪಡೆಯಲಾಯಿತು. ಇದಲ್ಲದೆ, ಅಪ್ರಾಪ್ತ ಚಾಲಕರ ವಿರುದ್ಧ 11 ಪ್ರಕರಣಗಳು ದಾಖಲಾಗಿವೆ ಎಂದರು.



> ಗದಗ-ಬೆಟಗೇರಿ ಅವಳಿ ನಗರದಲ್ಲಿ ಮಾತ್ರವಲ್ಲದೆ, ಜಿಲ್ಲೆಯಾದ್ಯಂತ ಪಾರ್ಕಿಂಗ್ ವ್ಯವಸ್ಥೆಗೆ ಹೆಚ್ಚಿನ ಆದ್ಯತೆ ನೀಡಲಾಗುತ್ತಿದೆ. ಈ ಹಿನ್ನೆಲೆಯಲ್ಲಿ ಸಂಚಾರ ದಟ್ಟಣೆಯನ್ನು ನಿಯಂತ್ರಿಸಲು ಕೆಲ ಪ್ರಯೋಗಗಳನ್ನೂ ಕೈಗೊಳ್ಳಲಾಗಿದೆ. ಈ ಬಗ್ಗೆ ಸಾರ್ವಜನಿಕರ ಜೊತೆ ಸಭೆ ನಡೆಸಲಾಗಿದ್ದು, ಎಲ್ಲರಿಗೂ ಅನುಕೂಲ ಆಗುವ ನಿಟ್ಟಿನಲ್ಲಿ ಕ್ರಮ ಕೈಗೊಳ್ಳಲಾಗುವುದು.
>
> **– ಬಿ ಎಸ್ ನೇಮಗೌಡ.**
> ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ, ಗದಗ.

ಈ ವಿಶೇಷ ಕಾರ್ಯಾಚರಣೆ ಯಶಸ್ವಿಯಾಗಲು ಕಾರಣರಾದ ಪೊಲೀಸ್ ಅಧಿಕಾರಿಗಳು ಮತ್ತು ಸಿಬ್ಬಂದಿಗಳನ್ನು ಅಭಿನಂದಿಸಿ, ಬಹುಮಾನವನ್ನೂ ನೀಡಲಾಗುವುದು. ಪೊಲೀಸರ ಕಾರ್ಯಾಚರಣೆಗೆ ಜಿಲ್ಲೆಯಾದ್ಯಂತ ಸಾರ್ವಜನಿಕರಿಂದಲೂ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗಿದೆ. ಮುಂಬರುವ ದಿನಗಳಲ್ಲಿ ಸಾರ್ವಜನಿಕರಿಗೆ ಅನುಕೂಲ ಆಗುವ ಇನ್ನೂ ಹಲವು ಕಾರ್ಯಾಚರಣೆಗಳನ್ನು ಕೈಗೊಳ್ಳುತ್ತೇವೆ ಎಂದು ಪೊಲೀಸ್ ವರಿಷ್ಠಾಧಿಕಾರಿ ಬಿ ಎಸ್ ನೇಮಗೌಡ ತಿಳಿಸಿದರು.

### 7ನೇ ರೋಜಗಾರ್ ಮೇಳಕ್ಕೆ ಚಾಲನೆ ನೀಡಿದ ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ

# ದೇಶಕ್ಕಾಗಿ ನಿಸ್ವಾರ್ಥ, ಪ್ರಾಮಾಣಿಕ ಸೇವೆ ಸಲ್ಲಿಸಿ




■ ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ಇಂದು ದೇಶದ 44 ಕಡೆಗಳಲ್ಲಿ ರೋಜಗಾರ್ ಮೇಳ ನಡೆಯುತ್ತಿದೆ. ವಿವಿಧ ಇಲಾಖೆಗಳಲ್ಲಿ ಹೊಸದಾಗಿ ನೇಮಕಗೊಂಡ ಸುಮಾರು 70 ಸಾವಿರಕ್ಕೂ ಅಧಿಕ ಜನರಿಗೆ ಉದ್ಯೋಗ ಪತ್ರಗಳನ್ನು ವಿತರಿಸಲಾಗುತ್ತಿದೆ. ದೇಶಕ್ಕಾಗಿ ನಾವು ದುಡಿಯುತ್ತಿದ್ದೇವೆ ಎಂಬ ಭಾವನೆ ಕೆಲಸ ಮಾಡುವವರಲ್ಲಿ ಮೂಡಬೇಕು. ದೇಶದ ವಿಕಾಸ, ಬದಲಾವಣೆಗೆ ಕೆಲಸ ಮಾಡುತ್ತಿದ್ದೇವೆ ಎನ್ನುವ ಹೆಮ್ಮೆ ಅವರಲ್ಲಿ ಮೂಡಬೇಕು. ದೇಶಕ್ಕಾಗಿ ನಿಸ್ವಾರ್ಥ, ಪ್ರಾಮಾಣಿಕವಾಗಿ ಸೇವೆ ಸಲ್ಲಿಸಬೇಕು ಎಂದು ಕೇಂದ್ರ ಕೃಷಿ ಮತ್ತು ರೈತರ ಕಲ್ಯಾಣ ಖಾತೆ ರಾಜ್ಯ ಸಚಿವರಾದ ಶೋಭಾ ಕರಂದ್ಲಾಜೆ ಹೇಳಿದರು.

ವಿದ್ಯಾನಗರದ ಬಿವಿಬಿ ಇಂಜಿನಿಯರಿಂಗ್ ಕಾಲೇಜಿನ ಬಯೋಟೆಕ್ನಾಲಜಿ ಸಭಾಂಗಣದಲ್ಲಿ ಆದಾಯ ತೆರಿಗೆ ಇಲಾಖೆ, ರೈಲ್ವೆ ಇಲಾಖೆ, ಅಂಚೆ ಇಲಾಖೆ ಸೇರಿದಂತೆ ವಿವಿಧ ಇಲಾಖೆಗಳ ಸಹಯೋಗದಲ್ಲಿ ಆಯೋಜಿಸಿದ್ದ ಸರ್ಕಾರಿ ಉದ್ಯೋಗಗಳಲ್ಲಿ ಹೊಸದಾಗಿ ನೇಮಕಗೊಂಡವರಿಗೆ ನೇಮಕಾತಿ ಪತ್ರಗಳ ವಿತರಣೆಯ 7ನೇ ರೋಜಗಾರ್ ಮೇಳವನ್ನು ದೀಪ ಬೆಳಗಿಸುವುದರ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು.

> ಆದಾಯ ತೆರಿಗೆ ಇಲಾಖೆ, ರೈಲ್ವೆ ಇಲಾಖೆ, ಅಂಚೆ ಇಲಾಖೆ, ಭಾರತೀಯ ಜೀವವಿಮಾ ನಿಗಮ (ಎಲ್.ಐ.ಸಿ), ಕರ್ನಾಟಕ ವಿಕಾಸ ಗ್ರಾಮೀಣ ಬ್ಯಾಂಕ್, ಐಐಟಿ ಸೇರಿದಂತೆ ವಿವಿಧ ಇಲಾಖೆಗಳಲ್ಲಿ ಹೊಸದಾಗಿ ನೇಮಕಾತಿ ಹೊಂದಿದ 25 ಅಭ್ಯರ್ಥಿಗಳಿಗೆ ಸಾಂಕೇತಿಕವಾಗಿ ನೇಮಕಾತಿ ಪತ್ರಗಳನ್ನು ವಿತರಿಸಲಾಯಿತು. ಆದಾಯ ತೆರಿಗೆ ಇಲಾಖೆ 1, ರೈಲ್ವೆ ಇಲಾಖೆ 52, ಎಲ್.ಐ.ಸಿ 50, ಐಐಟಿ 18, ಅಂಚೆ ಇಲಾಖೆ 17 , ಕರ್ನಾಟಕ ವಿಕಾಸ ಗ್ರಾಮೀಣ ಬ್ಯಾಂಕ್ 10 ಒಟ್ಟಾರೆ 148 ಜನರಿಗೆ ಕಾರ್ಯಕ್ರಮದಲ್ಲಿ ನೇಮಕಾತಿ ಪತ್ರಗಳನ್ನು ನೀಡಲಾಯಿತು.

19 ವರ್ಷದವರು ಸಹ ಉದ್ಯೋಗ ಪಡೆದುಕೊಳ್ಳುತ್ತಿದ್ದಾರೆ. ಹೀಗಾಗಿ ಅವರು 40 ವರ್ಷಕ್ಕೂ ಅಧಿಕ ವರ್ಷಗಳ ಕಾಲ ಸರ್ಕಾರಿ ಸೇವೆ ಸಲ್ಲಿಸಲಿದ್ದಾರೆ. ಎಲ್ಲರೂ ಒಟ್ಟಿಗೆ ಕೆಲಸ ಮಾಡಬೇಕು. ಅಭಿವೃದ್ಧಿಯ ಕಾರ್ಯಗಳಿಗೆ ಕೈ ಜೋಡಿಸಬೇಕು. ಭಾರತ ಇಂದು ಆಹಾರದಲ್ಲಿ ಸ್ವಾವಲಂಬನೆ ಸಾಧಿಸಿದೆ. ದೇಶದ 147 ಕೋಟಿ ಜನರಿಗೆ ಆಹಾರ ಪೂರೈಕೆ ಮಾಡುತ್ತಿರುವ ರೈತರ ಬಗ್ಗೆ ಹೆಮ್ಮೆಯಿದೆ. ಹಣ್ಣು, ತರಕಾರಿ, ಆಹಾರ ಪದಾರ್ಥಗಳನ್ನು ಬೇರೆ ದೇಶಗಳಿಗೆ ರಫ್ತು ಮಾಡಲಾಗುತ್ತಿದೆ. ನಮ್ಮ ದೇಶದ ▸▸ 3ನೇ ಪುಟಕ್ಕೆ

## ದೂದನಾನಾ ದರ್ಗಾ ಕಮಿಟಿಯಲ್ಲಿ ಅವ್ಯವಹಾರವಾಗಿಲ್ಲ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ದೂದನಾನಾ ದರ್ಗಾ ಕಮಿಟಿಯ ಪದಾಧಿಕಾರಿಗಳು ಕಳೆದ ಜೂ.20 ರಂದು ದರ್ಗಾ ಕಮೀಟಿಯಲ್ಲಿ ಅವ್ಯವಹಾರವಾಗಿದೆ ಎಂದು ಮಾಡಿದ್ದ ಪರಸ್ಪರ ಆರೋಪ-ಪ್ರತ್ಯಾರೋಪ, ಆಪಾಧನೆಗಳು ಕೇವಲ ಆ ಕ್ಷಣದ ಆವೇಶ-ಉದ್ವೇಗದ ಮಾತುಗಳಾಗಿವೆ. ಯಾವುದೇ ಅವ್ಯವಹಾರ ನಡೆದಿಲ್ಲ ಎಂದು ವಕೀಲ ಮತ್ತು ಸಮಾಜದ ಯುವ ಮುಖಂಡ ನಜೀರ ಅಹ್ಮದ ಗದಗ ಹೇಳಿದರು.

ಅವರು ಪಟ್ಟಣದ ದೂದಪೀರ ದರ್ಗಾದ ಶಾದಿಮಹಲ್ ನಲ್ಲಿ ಮುಸ್ಲಿಂ ಸಮಾಜದ ಹಿರಿಯರ ಸಮ್ಮುಖದಲ್ಲಿ ನಡೆಸಿದ ರಾಜಿ ಸಂಧಾನ ಸಭೆಯ ಬಳಿಕ ಕರೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, ದೂದಪೀರಾ ದರ್ಗಾಕ್ಕೆ ಸಂಬಂಧಿಸಿದಂತೆ ಕಳೆದ ತಿಂಗಳು ಕಮಿಟಿಯ ಪದಾಧಿಕಾರಿಗಳು ಸಿಟ್ಟಿನ ಭರದಲ್ಲಿ ಮಾಡಿಕೊಂಡ ಆರೋಪ ಪ್ರತ್ಯಾರೋಪದ ಘಟನೆ ಆಕಸ್ಮಿಕ ಮತ್ತು ವಿಷಾಧಕರ. ಈ ಘಟನೆ ಎಲ್ಲ ಸಮಾಜದವರು ಮತ್ತು ದರ್ಗಾದ ಭಕ್ತರಲ್ಲಿ ತಪ್ಪು ಸಂದೇಶ ಮೂಡಿಸಿದೆ. ಈ ಬಗ್ಗೆ ವಿಷಾಧ ವ್ಯಕ್ತಪಡಿಸಿರುವ ಕಮಿಟಿಯ ಎಲ್ಲಾ ಪದಾಧಿಕಾರಿಗಳು ಪರಸ್ಪರ ಮನಸ್ತಾಪ ಮರೆತು ರಾಜಿ ಮಾಡಿಕೊಂಡಿದ್ದಾರೆ. ಇನ್ನು ಮುಂದೆ ಈ ರೀತಿ ಘಟನೆ ನಡೆಯದಂತೆ ಹಿರಿಯರ ಮಾರ್ಗದರ್ಶನದಲ್ಲಿ ದರ್ಗಾದ ಅಭಿವೃದ್ಧಿ ಶ್ರಮಿಸಲು ಬದ್ಧರಾಗಿದ್ದಾರೆ ಎಂದರು.

ಈ ವೇಳೆ ▸▸ 3ನೇ ಪುಟಕ್ಕೆ

## ರೈತ ಬಾಂಧವರ ಗಮನಕ್ಕೆ

■ ವಿಜಯಸಾಕ್ಷಿ ಸುದ್ದಿ, ಗದಗ

ಪ್ರಸಕ್ತ ಸಾಲಿನ ಮುಂಗಾರು ಹಂಗಾಮಿನ ಬೆಳೆ ಸಮೀಕ್ಷೆ ಈಗಾಗಲೇ ಪ್ರಾರಂಭವಾಗಿದ್ದು, ರೈತರು ತಾವು ಬೆಳೆದ ಬೆಳೆಗಳ ವಿವರಗಳನ್ನು ತಾವೇ ಖುದ್ದಾಗಿ ಗೂಗಲ್ ಪ್ಲೇಸ್ಟೋರ್ ನಿಂದ "ಮುಂಗಾರು ರೈತರ ಬೆಳೆ ಸಮೀಕ್ಷೆ 2023" ಹಾಗೂ ಆಯಾ ಗ್ರಾಮದ ಖಾಸಗಿ ನಿವಾಸಿಗಳಿಗೆ ಮುಂಗಾರು ಬೆಳೆ ಸಮೀಕ್ಷೆ 2023-24ನ್ನು Download ಮಾಡಿಕೊಂಡು ಬೆಳೆ ವಿವರಗಳನ್ನು ದಾಖಲಿಸಬೇಕಾಗಿದೆ.

ವಿವರಗಳನ್ನು ದಾಖಲಿಸುವುದರಿಂದ ರೈತರಿಗೆ ಕನಿಷ್ಠ ಬೆಂಬಲ ಬೆಲೆ ಯೋಜನೆ, ಬೆಳೆ ವಿಮೆ ಯೋಜನೆ, ಬರಗಾಲ ಮತ್ತು ಪ್ರವಾಹ ಸಂದರ್ಭದಲ್ಲಿ ನಷ್ಟ ಪರಿಹಾರ ಪಡೆಯಲು, ಪಹಣಿಯಲ್ಲಿ ಬೆಳೆ ವಿವರಗಳನ್ನು ದಾಖಲಿಸಲು ಮತ್ತು ಬೆಳೆಸಾಲ ಪಡೆಯುವಲ್ಲಿ ಬೆಳೆ ಸಮೀಕ್ಷೆ ಕಡ್ಡಾಯವಾಗಿರುವುದರಿಂದ ರೈತರು ಬೆಳೆ ವಿವರಗಳನ್ನು ತ್ವರಿತವಾಗಿ ಬೆಳೆ ಸಮೀಕ್ಷೆ ಆಪ್‌ನಲ್ಲಿ ದಾಖಲಿಸಿ ಇದರ ಸದುಪಯೋಗ ಪಡೆದುಕೊಳ್ಳಬೇಕಿದೆ. ರೈತರು ಬೆಳೆ ವಿವರಗಳನ್ನು ಅಪ್‌ಲೋಡ್ ಮಾಡದಿದ್ದಲ್ಲಿ ಮೇಲೆ ತಿಳಿಸಿದ ಸರ್ಕಾರದ ಯೋಜನೆಗಳ ಲಾಭದಿಂದ ವಂಚಿತರಾಗುವ ಸಾಧ್ಯತೆ ಇರುವುದರಿಂದ ರೈತರು ಇದನ್ನು ಗಂಭೀರವಾಗಿ ಪರಿಗಣಿಸಿ ತುರ್ತಾಗಿ ದಿನಾಂಕ 25-07-2023ರೊಳಗಾಗಿ ವಿವರಗಳನ್ನು ದಾಖಲಿಸಬೇಕು ಎಂದು ಶ್ರೀಮತಿ ತಾರಾಮಣಿ ಜಿ.ಹೆಚ್. ಜಂಟಿ ಕೃಷಿ ನಿರ್ದೇಶಕರು, ಗದಗ ರವರು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ. ಹೆಚ್ಚಿನ ಮಾಹಿತಿಗಾಗಿ ರೈತರು ತಮ್ಮ ಗ್ರಾಮದ ಖಾಸಗಿ ನಿವಾಸಿಗಳು, ಕಂದಾಯ/ಕೃಷಿ/ತೋಟಗಾರಿಕೆ/ರೇಷ್ಮೆ ಇಲಾಖೆಗಳ ಅಧಿಕಾರಿಗಳನ್ನು ಸಂಪರ್ಕಿಸಬಹುದು ಹಾಗೂ ಸಹಾಯವಾಣಿ ಸಂಖ್ಯೆಗೆ 8448447715 ಕರೆ ಮಾಡಲು ಕೋರಿದೆ.

### ಮೊಹರಂ ಹಬ್ಬದ ಪೂರ್ವಭಾವಿ ಶಾಂತಿ ಸಭೆಯಲ್ಲಿ ಸಿಪಿಐ ವಿಕಾಸ ಪಿ.ಎಲ್ ಎಚ್ಚರಿಕೆ

# ಸೌಹಾರ್ದತೆ ಕದಡುವವರ ಮೇಲೆ ನಿರ್ದಾಕ್ಷಿಣ್ಯ ಕ್ರಮ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಧರ್ಮ, ಸಂಸ್ಕೃತಿಯ ಪ್ರತೀಕವಾದ ಹಬ್ಬಗಳ ಆಚರಣೆಯ ನೆಪದಲ್ಲಿ ಕಾನೂನು ಬಾಹೀರ ಚಟುವಟಿಕೆಗಳು ಮತ್ತು ಶಾಂತಿ-ಸುವ್ಯವಸ್ಥೆ, ಸೌಹಾರ್ಧತೆ ಕದಡುವ ಯಾವುದೇ ಘಟನೆಗಳು ಜರುಗಿದರೆ ತಪ್ಪಿತಸ್ಥರ ಮೇಲೆ ನಿರ್ಧಾಕ್ಷಿಣ್ಯ ಕ್ರಮ ಕೈಗೊಳ್ಳುವುದಾಗಿ ಸಿಪಿಐ ವಿಕಾಸ ಪಿ.ಎಲ್ ಎಚ್ಚರಿಕೆ ನೀಡಿದರು.

ಅವರು ಶನಿವಾರ ಪಟ್ಟಣದ




ಪೊಲೀಸ್ ಠಾಣೆಯಲ್ಲಿ ಜು.29 ರಂದು ನಡೆಯುವ ಮೊಹರಂ ಹಬ್ಬದ ಪ್ರಯುಕ್ತ ಕರೆದ ಸಾರ್ವಜನಿಕ ಶಾಂತಿ ಸಭೆಯಲ್ಲಿ ಮಾತನಾಡಿ, ಹಬ್ಬಗಳನ್ನು ಶಾಂತಿ-ಸೌಹಾರ್ಧತೆಯಿಂದ ಆಚರಣೆ ಮಾಡಬೇಕು. ಆಚರಣೆಯ ನೆಪದಲ್ಲಿ ಯಾವುದಕ್ಕೂ ಅಪಚಾರವಾಗದಂತೆ ಹಬ್ಬಗಳ ಮೂಲ ಉದ್ದೇಶವನ್ನು ಗಮನದಲ್ಲಿಟ್ಟುಕೊಂಡು ಶಿಸ್ತು, ಸಂಯಮತೆ ಮತ್ತು ಸಾಂಪ್ರದಾಯಿಕವಾಗಿ ಹಬ್ಬಗಳನ್ನು ಆಚರಿಸಬೇಕು ಎಂದು ಹೇಳಿದರು.

ಅಂಜುಮನ್ ಕಮಿಟಿ ಅಧ್ಯಕ್ಷ ಎಂ.ಎಂ. ಗದಗ ಮಾತನಾಡಿ, ತ್ಯಾಗ ಬಲಿದಾನದ ಪ್ರತೀಕವಾದ ಮೊಹರಂ ಹಬ್ಬವನ್ನು ▸▸ 3ನೇ ಪುಟಕ್ಕೆ

## ಬಸವದಳದ 'ಶರಣ ಸಂಗಮ' ಕಾರ್ಯಕ್ರಮ ಇಂದು

■ ವಿಜಯಸಾಕ್ಷಿ ಸುದ್ದಿ, ಗದಗ



ಶಿವಾನಂದ ನಗರದ ಬಸವ ಸಮುದಾಯ ಭವನದಲ್ಲಿ ರವಿವಾರ ಬೆಳಿಗ್ಗೆ 11 ಗಂಟೆಗೆ ನಡೆಯಲಿರುವ ಬಸವದಳದ 1551ನೇ ಶರಣ ಸಂಗಮದಲ್ಲಿ ಬಸವಾದಿ ಶಿವಶರಣರ 'ವಚನ ತತ್ವಾನುಭವ' ಚಿಂತನೆ ಹಾಗೂ ಶರಣೆ ನೀಲಮ್ಮನವರ ಸ್ಮರಣೆ ಕುರಿತು ಉಪನ್ಯಾಸ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

ಅಧ್ಯಕ್ಷತೆಯನ್ನು ಶರಣೆ ಗೌರಕ್ಕ ಎನ್ ಬಡಿಗಣ್ಣವರ ವಹಿಸುವರು. ಶರಣೆ ಸನ್ನಿಧಿ ಲಿಂಗಧಾಳ ಇವರು ವಚನ ಚಿಂತನೆಯನ್ನು ಮಾಡುವರು. ಶರಣೆ ಗಂಗಮ್ಮ ಹೂಗಾರ ಉಪನ್ಯಾಸ ಮಾಡುವರು. ಬಸವದಳದ ಸದಸ್ಯರು, ಶರಣ ಸಾಹಿತ್ಯಾಭಿಮಾನಿಗಳು ಹಾಗೂ ಆಸಕ್ತರು ಭಾಗವಹಿಸಬೇಕೆಂದು ಸಂಘಟಕರ ಪರವಾಗಿ ಪ್ರಕಾಶ ಅಸುಂಡಿಯವರು ವಿನಂತಿಸಿದ್ದಾರೆ.

## 2ನೇ ವರ್ಷದ ಲ್ಯಾಟರಲ್ ಎಂಟ್ರಿ ಡಿಪ್ಲೋಮಾ ಪ್ರವೇಶದ ಅವಧಿ ವಿಸ್ತರಣೆ

■ ವಿಜಯಸಾಕ್ಷಿ ಸುದ್ದಿ, ಗದಗ

2023-24ನೇ ಶೈಕ್ಷಣಿಕ ಸಾಲಿಗೆ ಸರ್ಕಾರಿ ಪಾಲಿಟೆಕ್ನಿಕ್, ನರಸಾಪೂರ, ಬೆಟಗೇರಿ, ಗದಗ ಸಂಸ್ಥೆಯಲ್ಲಿ ಖಾಲಿ ಇರುವ ಡಿಪ್ಲೋಮಾ ಕೋರ್ಸ್‌ಗಳಿಗೆ ದ್ವಿತೀಯ/ತೃತೀಯ ಸೆಮಿಸ್ಟರ್‌ನ ಡಿಪ್ಲೋಮಾ ಪ್ರವೇಶಕ್ಕೆ 2 ವರ್ಷದ ಐಟಿಐ/ ದ್ವಿತೀಯ ಪಿಯುಸಿ (ವಿಜ್ಞಾನ/ ತಾಂತ್ರಿಕ ವಿಷಯಗಳ) ಪಾಸಾದ ಅರ್ಹ ಅಭ್ಯರ್ಥಿಗಳಿಂದ ಪ್ರವೇಶ ಪ್ರಕ್ರಿಯೆಯನ್ನು ಪ್ರಾಂಶುಪಾಲರ ಹಂತದಲ್ಲಿ ಆಫ್-ಲೈನ್ ಮೂಲಕ ಮೊದಲು ಬಂದವರಿಗೆ ಮೊದಲ ಆದ್ಯತೆ ಮೇರೆಗೆ ಪ್ರವೇಶದ ಅವಧಿಯನ್ನು ಜುಲೈ 28ರವರೆಗೆ ವಿಸ್ತರಿಸಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಹೆಚ್ಚಿನ ಮಾಹಿತಿಯನ್ನು ಕಾಲೇಜಿನ ಕಛೇರಿ ಅವಧಿಯಲ್ಲಿ ಪಡೆಯಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.

### ಸರ್ವಾಧಿಕಾರಿ ನೀತಿಯನ್ನು ಅನುಸರಿಸುತ್ತಿರುವ ರಾಜ್ಯ ಕಾಂಗ್ರೆಸ್ ಸರ್ಕಾರದ ವಿರುದ್ಧ ಪ್ರತಿಭಟನೆ

# ಕಾಂಗ್ರೆಸ್ ಸರ್ಕಾರದ ನಡೆ ಖಂಡನೀಯ

■ ವಿಜಯಸಾಕ್ಷಿ ಸುದ್ದಿ, ಗದಗ

ಭಾರತೀಯ ಜನತಾ ಪಾರ್ಟಿ ಗದಗ ಜಿಲ್ಲಾ ಘಟಕದ ವತಿಯಿಂದ ಸರ್ವಾಧಿಕಾರಿ ಧೋರಣೆಯನ್ನು ಅನುಸರಿಸುತ್ತಿರುವ ರಾಜ್ಯದ ಕಾಂಗ್ರೆಸ್ ಸರ್ಕಾರದ ವಿರುದ್ಧ ಶನಿವಾರ ಪ್ರತಿಭನೆ ನಡೆಸಿದರು.

ವಿಧಾನ ಪರಿಷತ್ ಸದಸ್ಯ ಎಸ್ ವ್ಹಿ ಸಂಕನೂರ ಮಾತನಾಡಿ, ಅಧಿವೇಶನದ ಸಂದರ್ಭದಲ್ಲಿ ಚರ್ಚೆಗಳಿಲ್ಲದೆ ಸದನದ ಕಲಾಪ ನಡೆಯುವುದು ಅಸಾಧ್ಯ. ಚರ್ಚೆಗೆ ಅವಕಾಶ ನೀಡದೆ, ಏಕಪಕ್ಷೀಯವಾಗಿ ಕಾಂಗ್ರೆಸ್ ಪಕ್ಷದ ಸ್ಪೀಕರ್ ಯು ಟಿ



ಖಾದರ್ ವಿಪಕ್ಷಗಳಾದ ಬಿಜೆಪಿ ಮತ್ತು ಜೆಡಿಎಸ್‌ಗಳಿಗೆ ಚರ್ಚಿಸಲು ಅವಕಾಶವನ್ನೇ ನೀಡದೆ ನಮ್ಮ ಶಾಸಕರನ್ನು ಸಸ್ಪೆಂಡ್ ಮಾಡಿ ಬಂಧಿಸಿದ್ದನ್ನು ಇಡೀ ರಾಜ್ಯವೇ ಖಂಡಿಸಬೇಕು ಎಂದರು.

ಬಿಜೆಪಿ ಜಿಲ್ಲಾಧ್ಯಕ್ಷ ಮುತ್ತಣ್ಣ ಲಿಂಗನಗೌಡ್ರ ಮಾತನಾಡಿ, ರಾಜ್ಯದ ಬಜೆಟ್ ಅಧಿವೇಶನದಲ್ಲಿ ಸಿದ್ರಾಮಯ್ಯ ಸರ್ಕಾರದ ಸರ್ವಾಧಿಕಾರಿ ಧೋರಣೆಯಿಂದ ರಾಜ್ಯದ ಬಜೆಟ್, ರೈತರ ಆತ್ಮಹತ್ಯೆ, ಜೈನಮುನಿಗಳ ಹತ್ಯೆ, ಭಯೋತ್ಪಾದಕರ ಅಟ್ಟಹಾಸ, 30ಕ್ಕೂ ಹೆಚ್ಚು ಐಎಎಸ್ ಅಧಿಕಾರಿಗಳನ್ನು ವಯಕ್ತಿಕ ಕೆಲಸಗಳಿಗೆ ಬಳಸಿಕೊಂಡಿರುವುದು, ಸದನದಲ್ಲಿ ಪ್ರತಿಭಟಿಸಿದಾಗ ಕುಂಟನೆಪ ನೀಡಿ 10 ಜನ ಶಾಸಕರನ್ನು ಸಸ್ಪೆಂಡ್ ಮಾಡಿರುವ ಕಾಂಗ್ರೆಸ್ ಸರ್ಕಾರದ ನಡೆ ಖಂಡನೀಯ ಎಂದರು.

ಪಕ್ಷದ ಹಿರಿಯರಾದ ಎಂ ಎಸ್ ಕರಿಗೌಡ್ರ, ರಾಜು ಕುರಡಗಿ, ಶ್ರೀಪತಿ ಉಡುಪಿ, ರವಿ ದಂಡಿನ, ನಾಗರಾಜ ▸▸ 3ನೇ ಪುಟಕ್ಕೆ

## ಪ್ರಿಯಕರನ ಜೊತೆ ಸೇರಿ ಪತಿಗೆ ಚಟ್ಟ ಕಟ್ಟಿದ ಪತ್ನಿ; ಆರೋಪಿಗಳ ಬಂಧನ

■ವಿಜಯಸಾಕ್ಷಿ ಸುದ್ದಿ, ಗುರುಮಠಕಲ್





ಅನೈತಿಕ ಸಂಬಂಧಕ್ಕೆ ಅಡ್ಡಿಯಾಗಿದ್ದ ಗಂಡನನ್ನೇ ಪ್ರಿಯಕರನ ಜೊತೆಗೆ ಸೇರಿ ಚಟ್ಟ ಕಟ್ಟಿ, ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾನೆ ಎಂದು ಬಿಂಬಿಸಲು ಹೋಗಿದ್ದ ಪ್ರಕರಣವನ್ನು ಗುರುಮಠಕಲ್ ಪೊಲೀಸರು ಭೇದಿಸಿದ್ದಾರೆ.

ಯಾದಗಿರಿ ಜಿಲ್ಲೆಯ ಗುರುಮಠಕಲ್ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಬರುವ ಕೊಂಕಲ್ ಗ್ರಾಮದ ಜಮೀನೊಂದರ ಮರದಲ್ಲಿ ವ್ಯಕ್ತಿಯೊಬ್ಬನ ಶವ ನೇಣು ಹಾಕಿಕೊಂಡಿರುವ ಸ್ಥಿತಿಯಲ್ಲಿ ಪತ್ತೆಯಾಗಿತ್ತು. ಮೃತನನ್ನು ಅದೇ ಗ್ರಾಮದ ಕಾಶಪ್ಪ ತಂದೆ ನಾಗಪ್ಪ ಮಲ್ಲಪ್ಪೋಳ ಎಂದು ಗುರುತಿಸಲಾಗಿತ್ತು.

ಮೃತನ ಸಹೋದರಿ ಕಾಶಮ್ಮ ಮೃತ ಕಾಶಪ್ಪನ ಸಾವಿನಲ್ಲಿ ಸಂಶಯ ವ್ಯಕ್ತಪಡಿಸಿ ಪೊಲೀಸ್ ಠಾಣೆಗೆ ದೂರು ನೀಡಿದ್ದಳು. ಪ್ರಕರಣ ದಾಖಲು ಮಾಡಿಕೊಂಡ ಗುರುಮಠಕಲ್ ಪೊಲೀಸರು, ಪ್ರಕರಣ ಭೇದಿಸಲು ತಂಡ ರಚಿಸಿ ತನಿಖೆ ಕೈಗೊಂಡ ಪೊಲೀಸರು, ಕೊಲೆಗೀಡಾದ ಕಾಶಪ್ಪನ ಪತ್ನಿ ಅನಿತಾ ಹಾಗೂ ಅವಳ ಪ್ರಿಯಕರ ನಾಗೇಶ್ ತಂದೆ ಮಲ್ಲಪ್ಪ ಹತ್ತಿಕುಣಿಯನ್ನು ಶುಕ್ರವಾರ ರಾತ್ರಿ ಬಂಧಿಸಿದ್ದಾರೆ.

ಅನಿತಾ ಹಾಗೂ ನಾಗೇಶ್ ಜೂನ್ 15 ರಂದು ರಾತ್ರಿ ಕಾಶಪ್ಪ ಮಲಗಿಕೊಂಡಾಗ ಆತನ ಕುತ್ತಿಗೆಗೆ ಹಾಕಿ ಬಿಗಿದು ಉಸಿರು ಗಟ್ಟಿಸಿ ಕೊಲೆ ಮಾಡಿದ್ದಾರೆ. ನಂತರ ಶವವನ್ನು ಬೈಕಿನಲ್ಲಿ ಸಮೀಪದ ಜಮೀನೊಂದರಲ್ಲಿ ತೆಗೆದುಕೊಂಡು ಹೋಗಿ ಮರಕ್ಕೆ ಶವವನ್ನು ತೂಗು ಹಾಕಿ ಕಾಶಪ್ಪನೇ ನೇಣು ಹಾಕಿಕೊಂಡು ಮೃತಪಟ್ಟಿದ್ದಾನೆ ಎಂದು ಬಿಂಬಿಸಲು ಹೋಗಿದ್ದರು ಎನ್ನಲಾಗಿದೆ.

ಎಸ್ಪಿ ಹಾಗೂ ಡಿವೈಎಸ್ಪಿ ಅವರ ಮಾರ್ಗದರ್ಶನದಲ್ಲಿ ಗುರುಮಠಕಲ್ ಪೊಲೀಸ್ ಇನ್ಸ್‌ಪೆಕ್ಟರ್ ದೌಲತ್ ಎನ್. ಕೆ ಅವರ ನೇತೃತ್ವದಲ್ಲಿ ಪಿಎಸ್ಐ ಭೀಮರಾಯ ಹಾಗೂ ಸಿಬ್ಬಂದಿಗಳಾದ ನರಸಿಂಗರಾವ, ವಿಶ್ವನಾಥರೆಡ್ಡಿ, ದೇವೆಂದ್ರ, ನರೇಂದ್ರರೆಡ್ಡಿ, ರಹೀಮ್, ಮಹ್ಮದ ಶರೀಫ, ನರಸಿರೆಡ್ಡಿ ಸಾಹೇಬರೆಡ್ಡಿ, ಅಶೋಕ, ಹಾಗೂ ರಾಮಲಿಂಗಪ್ಪ ತಂಡವನ್ನು ರಚಿಸಲಾಗಿತ್ತು.

ತನಿಖಾ ತಂಡ ಸ್ಥಳೀಯರಿಂದ ಹಾಗೂ ವೈಜ್ಞಾನಿಕವಾಗಿ ಮಾಹಿತಿ ಸಂಗ್ರಹಿಸಿ ಕೊಲೆ ಮಾಡಿದ್ದ ಕಾಶಪ್ಪನ ಪತ್ನಿ ಅನಿತಾ ಹಾಗೂ ಅವಳ ಪ್ರಿಯಕರನನ್ನು ಬಂಧಿಸಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದ್ದಾರೆ.

ಕೊಲೆ ಪ್ರಕರಣ ಭೇದಿಸುವಲ್ಲಿ ಶ್ರಮಿಸಿದ ತನಿಖಾ ತಂಡಕ್ಕೆ ಯಾದಗಿರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು ಪ್ರಶಂಸೆ ವ್ಯಕ್ತಪಡಿಸಿದ್ದಾರೆ.



### ಸಮಾಜಕ್ಕೆ ಉತ್ತಮ ಸಂದೇಶವನ್ನು ಸಾರಿದ ತ್ಯಾಗದ ದಾರಿ ದೀವಿಗೆ

# ಮೊಹರಂ ಸಂಭ್ರಮದ ಹಬ್ಬವಲ್ಲ, ಆತ್ಮಾವಲೋಕನದ ಮೆರವಣಿಗೆ



ವಿಶೇಷವಾಗಿ ಗ್ರಾಮೀಣ ಪ್ರದೇಶದಲ್ಲಿ ಅತ್ಯಂತ ಸಡಗರ ಮತ್ತು ದುಃಖದಿಂದ ಆಚರಿಸುವ ಹಬ್ಬವೆಂದರೆ ಅದುವೇ ಮೊಹರಂ ಹಬ್ಬವಾಗಿದೆ. ನಾವು ಮೊಹರಂ ಹಬ್ಬ ಅಂದರೆ ಕೇವಲ ಐದು ದಿನ ಒಂದು ಮಸೀದಿ ಪ್ರತಿಷ್ಠಾನಗೊಂಡ ಅಲೆಯ ದೇವರನ್ನು ಸಕ್ಕರೆ ಮತ್ತು ಬ್ಯಾಟಿ ಹಾಕಿ, ನಾಡಿಗಳನ್ನು ಕೈಯಲ್ಲಿ ಕಟ್ಟಿಕೊಂಡು, ಹುಲಿಯ ವೇಷವನ್ನು ಹಾಕಿ ಗ್ರಾಮದ ತುಂಬೆಲ್ಲ ಹೆಜ್ಜೆಗಳನ್ನು ಹಾಕುವುದು ಸಹಜವಾಗಿ ನಮ್ಮ ಕಣ್ಣು ಮುಂದೆ ಬರುತ್ತದೆ. ಮೊಹರಂ ಹಬ್ಬದ ಈ ಸಮಯದಲ್ಲಿ ಆತ್ಮಾವಲೋಕನ ಮಾಡಿಕೊಳ್ಳಬೇಕಾಗಿರುವುದು ಮುಖ್ಯವಾಗಿದೆ.

ರಂಜಾನ್ ನಂತರ ಮುಸ್ಲಿಂ ಧರ್ಮದಲ್ಲಿ ಮೊಹರಂ ಎರಡನೇ ಪವಿತ್ರ ತಿಂಗಳು. ಇಸ್ಲಾಮಿಕ್ ಕ್ಯಾಲೆಂಡರ್ ಮೊಹರಂ ತಿಂಗಳಿನಿಂದ ಪ್ರಾರಂಭವಾಗುತ್ತದೆ. ಮೊಹರಂನ 10ನೇ ದಿನವನ್ನು ಯೌಮ್-ಎ-ಅಶುರಾ ಎಂದು ಕರೆಯಲಾಗುತ್ತದೆ. ಈ ದಿನ ಶೋಕದ ದಿನ. ಈ ದಿನ ಮುಸ್ಲಿಂ ಸಮುದಾಯ ಶೋಕಿಸುತ್ತದೆ. ಕುರಾನ್‌ನಲ್ಲಿ ಇದನ್ನು 'ಗಮ್ ತಿಂಗಳು' ಎಂದು ಕರೆಯಲಾಗುತ್ತದೆ. ಅದರ ನಂತರ ರಂಜಾನ್‌ನ ಎರಡನೇ ತಿಂಗಳು ಇರುತ್ತದೆ. ಇಸ್ಲಾಮಿಕ್ ಕ್ಯಾಲೆಂಡರ್ ಅನ್ನು ಹಿಜ್ರಿ ಕ್ಯಾಲೆಂಡರ್ ಎಂದೂ ಕರೆಯುತ್ತಾರೆ.

ನಂಬಿಕೆಗಳ ಪ್ರಕಾರ, ಇಸ್ಲಾಮಿಕ್ ವರ್ಷವು 622ರಲ್ಲಿ ಪ್ರಾರಂಭವಾಯಿತು ಮತ್ತು ಇಂದಿಗೂ ಇಸ್ಲಾಂ ಧರ್ಮದಲ್ಲಿ ಜನರು ತಮ್ಮ ಕ್ಯಾಲೆಂಡರ್ ಪ್ರಕಾರ ಹಬ್ಬವನ್ನು ಆಚರಿಸುತ್ತಾರೆ. ಇಸ್ಲಾಂ ಧರ್ಮದ ಪ್ರವಾದಿ ಮುಹಮ್ಮದ್ ಅವರ ಮೊಮ್ಮಗ ಇಮಾಮ್ ಹುಸೇನ್ ಜಿ ಅವರ ಹುತಾತ್ಮತೆಯನ್ನು ಹೊಂದಿದ ಮುಹರಮ್ ಅನ್ನು ಶೋಕಾಚರಣೆಯ ತಿಂಗಳು ಎಂದೂ ಕರೆಯುತ್ತಾರೆ. ಇಮಾಮ್ ಹುಸೇನ್ ಹುತಾತ್ಮರಾದ ಇಸ್ಲಾಂ ಧರ್ಮದ ಶಿಯಾ ಮುಸಲ್ಮಾನರ ಸ್ಮರಣಾರ್ಥ ಎಲ್ಲರೂ ಕಪ್ಪು ಬಟ್ಟೆ ಧರಿಸಿ ಬೀದಿಗಿಳಿದು ಮೆರವಣಿಗೆ ನಡೆಸಿ ಸಂದೇಶ ಸಾರುತ್ತಾರೆ.

ಇಸ್ಲಾಂ ಧರ್ಮ ಚಾಲ್ತಿಯಲ್ಲಿರುವ ಪ್ರಪಂಚದ ಎಲ್ಲಾ ದೇಶಗಳಲ್ಲಿ ಈ ಹಬ್ಬವನ್ನು ಆಚರಿಸಲಾಗುತ್ತದೆ.

ಮೊಹರಂ ಹಬ್ಬ ಹಿಂದೂ ಹಾಗೂ ಮುಸ್ಲಿಮರ ಭಾವೈಕ್ಯತೆಯನ್ನು ಸೂಚಿಸುವ ಹಬ್ಬ. ಈ ಹಬ್ಬದಲ್ಲಿ ಹಿಂದೂಗಳು ಕೂಡ ಪ್ರಮುಖ ಪಾತ್ರ ವಹಿಸುತ್ತಾರೆ. ಮೊಹರಂನ 10ನೇ ದಿನವನ್ನು ಅಶುರಾ ಎಂದು ಕರೆಯುತ್ತಾರೆ. ಇದು ಮುಸ್ಲಿಮರಿಗೆ ಮಹತ್ವದ ದಿನವಾಗಿದೆ. ಸುನ್ನಿ ಮತ್ತು ಶಿಯಾ ಮುಸ್ಲಿಮರು ಮೊಹರಂ ಅನ್ನು ವಿಭಿನ್ನವಾಗಿ ಆಚರಿಸುತ್ತಾರೆ. ಅನೇಕ ಸುನ್ನಿ ಮುಸ್ಲಿಮರಿಗೆ, ಈ ತಿಂಗಳು ಇಸ್ಲಾಮಿಕ್‌ನ ಹೊಸ ವರ್ಷದ ಆರಂಭವಾಗಿದೆ. ಶಾಂತಿಯ ಪ್ರತಿಬಿಂಬವಾಗಿದೆ. ಅಂತೆಯೇ, ಇಸ್ಲಾಂನ ಶಿಯಾವನ್ನು ಅನುಸರಿಸುವ ಮುಸ್ಲಿಮರಿಗೆ, ಈ ತಿಂಗಳು ದುಃಖದ, ಪಶ್ಚಾತಾಪದ ದಿನವಾಗಿದೆ.

ಶಿಯಾ ಮುಸ್ಲಿಮರಿಗೆ, ಮೊಹರಂ ತಿಂಗಳು ಪ್ರವಾದಿ ಮೊಹಮ್ಮದ್ ಪೈಗಂಬರರ ಮೊಮ್ಮಗ ಹುಸೇನ್ ಇಬ್ನ್ ಅಲಿಯ ಸಾವನ್ನು ನೆನಪಿಸುತ್ತದೆ. ಖಲೀಫಾ ಯಜಿದ್‌ನಿಂದ ಕ್ರಿಸ್ತಶಕ 680ರಲ್ಲಿ ಆಶುರಾ ದಿನದಂದು ಕರುಬಲಾ ಎಂಬ ಮರುಭೂಮಿಯಲ್ಲಿ ನಡೆದ ತುಮುಲ ಯುದ್ಧದಲ್ಲಿ ಹುಸೇನ್‌ನನ್ನು ಕೊಲ್ಲಲಾಯಿತು. ಹೀಗಾಗಿ ಅನೇಕ ಶಿಯಾಗಳು ಈ ತಿಂಗಳ ಪ್ರವಾದಿಯ ಕುಟುಂಬದ ಶೌರ್ಯವನ್ನು ನೆನಪಿಸಿಕೊಂಡು ದುಃಖಿಸುತ್ತಾರೆ.

ಅನೇಕ ಮುಸ್ಲಿಮರು ಆಶುರಾ ದಿನದಂದು ಉಪವಾಸವನ್ನು ಮಾಡುತ್ತಾರೆ. ಹಾಗೆಯೇ ಮೊಹರಂ ತಿಂಗಳಲ್ಲಿ ಕೃತಜ್ಞತೆಯನ್ನು ಸಲ್ಲಿಸುತ್ತಾರೆ. ಶಿಯಾ ಮುಸ್ಲಿಮರು ಸಹ ಶೋಕಾಚರಣೆಗಳಲ್ಲಿ ತೊಡಗುತ್ತಾರೆ. ಸಾರ್ವಜನಿಕ ಆಚರಣೆಗಳನ್ನು ಮಾಡುತ್ತಾರೆ. ಈ ವೇಳೆ ಆಲಾಯಿ ಕುಣಿತ, ಮೊಹರಂ ಪದಗಳನ್ನು ಹಾಡುವುದು, ದೇವರ ಕುಣಿತ, ಬೆಂಕಿಯಲ್ಲಿ ನಡೆದಾಡುವುದು ಸೇರಿದಂತೆ ಹಲವು ಆಚರಣೆಯನ್ನು ಮಾಡಲಾಗುತ್ತದೆ.

ಮೊಹರಂ ತಿಂಗಳ 10ನೇ ದಿನದಂದು ಇಮಾಮ್ ಹುಸೇನ್ ವೀರಮರಣವನ್ನಪ್ಪುತ್ತಾರೆ. ಮೊಹರಂ ಆಚರಣೆ ಮೂಲತಃ ಶೋಕಸ್ಥಾಯಿಯಾಗಿದ್ದರೂ ಕಾಲಚಕ್ರದಲ್ಲಿ ತನ್ನ ಮೂಲಭಾವ ಕಳೆದುಕೊಂಡು ಉತ್ಸವದ ರಂಗ ಪಡೆದು ರಂಜಿಸುತ್ತಿದೆ. ಇಮಾಮ್ ಹುಸೇನ್ ದುರಂತ ಸಾವಿನ ಸಂತಾಪ ಸೂಚಿಸುವ ಈ ಹಬ್ಬದಲ್ಲಿ ಹಸ್ತ ಸಂಕೇತಗಳನ್ನು ಬಳಸಲಾಗುತ್ತದೆ. ಹಿಂದೂ-ಮುಸ್ಲಿಮರು ಒಂದಾಗಿ ಭಾವೈಕ್ಯತೆಯಿಂದ ಮೊಹರಂ ಆಚರಣೆ ಮಾಡಲಾಗುತ್ತದೆ. ಹಿಂದೂಗಳೆಲ್ಲ ಸೇರಿ ನೈವೇದ್ಯ ನೀಡುತ್ತಾರೆ.

ಹಬ್ಬದ ಸಂದರ್ಭದಲ್ಲಿ ಪಿಂಜಾ ಅಥವಾ ದೇವರು ಹೊತ್ತವರಲ್ಲಿ ಭಯ, ಭಕ್ತಿ, ಹೇಳಿಕೆಗಳು, ರೈತರಿಗೆ ಭವಿಷ್ಯತ್ತಿನಲ್ಲಿ ಮಳೆ-ಬೆಳೆಯ ಬಗ್ಗೆ, ಸಂತಾನ ಪ್ರಾಪ್ತಿಯ ಬಗ್ಗೆ, ಮನೆತನಗಳ ಸಮಸ್ಯೆ ಪರಿಹಾರಗಳ ಬಗ್ಗೆ ಇನ್ನೂ ಮುಂತಾದ ಪ್ರಶ್ನೆಗಳನ್ನು ಭಕ್ತಾದಿಗಳು ಕೇಳುವ ಪದ್ಧತಿ ಉತ್ತರ ಕರ್ನಾಟಕದ ಗ್ರಾಮಗಳಲ್ಲಿ ಇನ್ನೂ ಜೀವಂತವಾಗಿದೆ.



**– ಸಿಕಂದರ ಎಂ.ಆರಿ.**
ಪತ್ರಕರ್ತರು, ಕಾನೂನು ವಿದ್ಯಾರ್ಥಿ.

## ಮಳೆಯಿಂದ ಮನೆಗೆ ಹಾನಿ: ಪರಿಹಾರಕ್ಕಾಗಿ ಮನವಿ

■ವಿಜಯಸಾಕ್ಷಿ ಸುದ್ದಿ, ಗದಗ



ಗದಗ-ಬೆಟಗೇರಿ ನಗರಸಭೆ ವ್ಯಾಪ್ತಿಯ ವಾರ್ಡ್ ನಂ.20ರ ಖಾನತೋಟದಲ್ಲಿ ವಾಸವಿರುವ ಬೀಬಿಜಾನ ಕೋಂ ಮಾಬುಸಾಬ ಜಮಖಾನ ಎಂಬುವರ ಮನೆಯು ಮಳೆಯಿಂದ ಸಂಪೂರ್ಣವಾಗಿ ಕುಸಿದು ಬಿದಿದ್ದು, ಈಗ ಈ ಕುಟುಂಬವು ಬೀದಿಗೆ ಬಂದಿದೆ. ಈ ಕುಟುಂಬದವರು ಕಡುಬಡವರಾಗಿದ್ದು, ಸದರಿ ಕುಟುಂಬಕ್ಕೆ ವಾಸಕ್ಕೆ ಪರ್ಯಾಯ ಮನೆ ಕಟ್ಟಿಕೊಳ್ಳಲು ಪರಿಹಾರ ನೀಡಬೇಕೆಂದು ಕರ್ನಾಟಕ ಪ್ರಜಾಪರ ವೇದಿಕೆಯ ಗದಗ ಜಿಲ್ಲಾ ಘಟಕದ ಪದಾಧಿಕಾರಿಗಳು ನಗರಸಭೆಗೆ ಮನವಿ ಸಲ್ಲಿಸಿ ಒತ್ತಾಯಿಸಿದರು.

ಮನವಿ ಸ್ವೀಕರಿಸಿದ ತಹಸೀಲ್ದಾರರು ಹಾಗೂ ನಗರಸಭೆ ಅಧ್ಯಕ್ಷರು ಶೀಘ್ರವಾಗಿ ಪರಿಹಾರ ನೀಡುವುದಾಗಿ ಭರವಸೆ ನೀಡಿದರು.

ಈ ಸಂದರ್ಭದಲ್ಲಿ ವೇದಿಕೆಯ ಜಿಲ್ಲಾಧ್ಯಕ್ಷ ರಫೀಕ್ ಧಾರವಾಡ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಸಮೀರ ಹೊಸಳ್ಳಿ, ಜಿಲ್ಲಾ ಮಹಿಳಾಧ್ಯಕ್ಷೆ ಫಾತೀಮಾ ಹೊನ್ನಾಪುರ, ಅಲ್ಪಸಂಖ್ಯಾತ ಜಿಲ್ಲಾಧ್ಯಕ್ಷ ಸಿರಾಜ ಲಕ್ಕುಂಡಿ, ಕಾರ್ಮಿಕರ ಜಿಲ್ಲಾಧ್ಯಕ್ಷ ತನ್ವೀರ್ ಮಿರ್ಜಿ, ಆಶ್ಫಾಕ ಮತ್ತು ಪದಾಧಿಕಾರಿಗಳು ಉಪಸ್ಥಿತರಿದ್ದರು.

## ಸ್ವಾಭಿಮಾನಿ ಕರವೇ ವತಿಯಿಂದ ರೈತ ಹುತಾತ್ಮ ದಿನಾಚರಣೆ

■ವಿಜಯಸಾಕ್ಷಿ ಸುದ್ದಿ, ಗದಗ



ಸ್ವಾಭಿಮಾನಿ ಕರ್ನಾಟಕ ರಕ್ಷಣಾ ವೇದಿಕೆ ಗದಗ ಉತ್ತರ ಕರ್ನಾಟಕದ ಜಿಲ್ಲಾಧ್ಯಕ್ಷ ಎಂ ಎ ಕುರ್ತಕೋಟಿ ಹಾಗೂ ಉಪಾಧ್ಯಕ್ಷ ರವಿ ಚಿಂತಾಲ ನೇತೃತ್ವದಲ್ಲಿ ನರಗುಂದದಲ್ಲಿ ರೈತ ಹುತಾತ್ಮ ದಿನಾಚರಣೆಯನ್ನು ಆಚರಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಎಂ ಎ ಕುರ್ತಕೋಟಿ ಹಾಗೂ ರವಿ ಚಿಂತಾಲ, ರೈತ ಸ್ಮಾರಕ ಭವನ ನಿರ್ಮಾಣ ಮಾಡಬೇಕು ಹಾಗೂ ಶಾಲಾ ಪಠ್ಯ-ಪುಸ್ತಕಗಳಲ್ಲಿ ನರಗುಂದ ರೈತರ ಹೋರಾಟದ ಬಗ್ಗೆ ಪಠ್ಯವನ್ನು ಸೇರಿಸಬೇಕೆಂದು ರಾಜ್ಯ ಸರ್ಕಾರಕ್ಕೆ ವಿನಂತಿಸಿದರು.

ಈ ಸಂದರ್ಭದಲ್ಲಿ ವಿಜಯ ಕೋಟಿನ್, ಮಂಜುನಾಥ ಹಡಪದ, ಹೈದರ ಹನೀಫ ಹಾದಿಮನಿ, ಮಾಬುಬ ಗುದಗಾನೂರ, ರಾಜು ಅರಹುಣಸಿ, ರಮೇಶ ಕರೇಗಾರ, ಅಲಿಅಕ್ಬರ ಸಂದಿಮನಿ, ಬಸೀರ ಮುಳಗುಂದ, ಮಹಮ್ಮದ ಹಾದಿಮನಿ, ಯಶವಂತ ನಡುವಿನಮನಿ, ರವಿ ಪೂಜಾರ, ಗುರುನಾಥ ದೊಡಮನಿ, ಶ್ರೀನಿವಾಸ ತೊಂಡಿಹಾಳ, ಆರೀಫ ಕಾತರಕಿ, ಮಾನಂದಮ್ಮ ಹಿರೇಮಠ, ಸಾವಕ್ಕ ಮಡಿವಾಳರ, ಶರಣಮ್ಮ ನಗಣಿ, ರತ್ನವ್ವ ಬಾಳಿಕಾಯಿ, ರಾಮವ್ವ ಕಳ್ಳಿಗುಡ್ಡಿ ಸೇರಿದಂತೆ ಗದಗ ಜಿಲ್ಲೆಯ ಸ್ವಾಭಿಮಾನಿ ಕರವೇ ಕಾರ್ಯಕರ್ತರು, ರೈತರು ಉಪಸ್ಥಿತರಿದ್ದರು.

### ಎನ್‌ಎಸ್‌ಎಸ್ ನಾಯಕತ್ವ ತರಬೇತಿ ಶಿಬಿರದಲ್ಲಿ ಸೋಲೋ ಕಲಾವಿದ ಲಕ್ಕಿ ಗುಪ್ತಾ

# ಭಾರತದಲ್ಲಿ ಗುರು-ಶಿಷ್ಯ ಪರಂಪರೆಗೆ ವಿಶೇಷ ಸ್ಥಾನವಿದೆ



> ನಿಮ್ಮ ಮನೆಯಲ್ಲಿನ ಪಾಲಕರು, ಸಂಬಂಧಿಕರಿಗೆ, ಊರಲ್ಲಿನ ಹಿರಿಯರಿಗೆ ನೀವು ಗೌರವವನ್ನು ನೀಡಲು ಕಲಿತಾಗ ನಿಮ್ಮಲ್ಲಿ ಸಂಸ್ಕಾರ ಬೆಳೆಯುತ್ತದೆ. ಈ ಮೂಲಕ ನೀವು ಉತ್ತಮ ವಿದ್ಯಾರ್ಥಿಗಳಾಗಲು ಸಾಧ್ಯ. ಮೊಬೈಲ್ ಮೇಲಿನ ನಿಮ್ಮ ಪ್ರೇಮವನ್ನು ಕಡಿಮೆ ಮಾಡಿ, ನೀವು ನಿಮ್ಮ ಅಧ್ಯಯನದ ಕಡೆಗೆ ಗಮನ ನೀಡಿ.
>
> **– ಲಕ್ಕಿ ಗುಪ್ತಾ.**
> ಸೋಲೋ ಕಲಾವಿದರು, ಜಮ್ಮು-ಕಾಶ್ಮೀರ.

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಭಾರತ ಒಂದು ವಿಶಿಷ್ಟವಾದ ದೇಶ. ಇಲ್ಲಿ ಸಂಸ್ಕಾರ, ಸಂಸ್ಕೃತಿಗಳಿಗೆ ಬಹಳಷ್ಟು ಮಹತ್ವವಿದೆ. ಆದ್ದರಿಂದಲೇ ಪಾಶ್ಚಿಮಾತ್ಯರು ಭಾರತದ ಕಡೆಗೆ ಬೆರಗುಗಣ್ಣುಗಳಿಂದ ನೋಡುತ್ತಾರೆ. ಇಲ್ಲಿ ಗುರು-ಶಿಷ್ಯ ಪರಂಪರೆಗೆ ಮಹತ್ವದ ಸ್ಥಾನವಿದೆ. ನೀವೂ ಸಹ ನಿಮ್ಮ ಗುರುಗಳಿಗೆ ಗೌರವ ನೀಡಿ, ಅವರಿಂದ ವಿದ್ಯೆಯನ್ನು ಪಡೆಯಬೇಕೆಂದು ಜಮ್ಮು-ಕಾಶ್ಮೀರದ ಸೋಲೋ ಕಲಾವಿದ ಲಕ್ಕಿ ಗುಪ್ತಾ ಹೇಳಿದರು.

ನರೇಗಲ್ಲದಲ್ಲಿ ನಡೆದಿರುವ ಎನ್‌ಎಸ್‌ಎಸ್ ನಾಯಕತ್ವ ತರಬೇತಿ ಶಿಬಿರದಲ್ಲಿ ಅವರು ತಮ್ಮ ಸೋಲೋ ಪ್ರದರ್ಶನದ ಮೂಲಕ ಗುರು-ಶಿಷ್ಯ ಪರಂಪರೆಯ ಸಂಬಂಧವನ್ನು ವ್ಯಕ್ತಪಡಿಸಿ ಮಾತನಾಡಿದರು.

ಇಂದಿನ ಶಿಕ್ಷಣ ಕುರಿತು, ಮೊಬೈಲ್ ಹಾವಳಿ ಕುರಿತು, ತಂದೆ-ಮಗನ ಸಂಬಂಧ ಕುರಿತು ಅವರು ಪ್ರದರ್ಶಿಸಿದ ಅನೇಕ ಸೋಲೊ ದೃಶ್ಯಗಳು ವೀಕ್ಷಕರ ಮನ ಕಲಕುವಂತಿದ್ದವು.

ಪಿಯುಸಿ ಓದುತ್ತಿದ್ದ ಮಗನ ತಂದೆ ಅಕಾಲಿಕ ನಿಧನರಾದಾಗ ಮಗ ಆ ಮನೆಯ ಜವಾಬ್ದಾರಿ ಹೊರುವ ಸನ್ನಿವೇಶವಂತೂ ಶಿಬಿರಾರ್ಥಿಗಳೆಲ್ಲರ ಕಣ್ಣುಗಳಲ್ಲಿ ನೀರು ತರಿಸಿತು. ಎಲ್ಲ ಪ್ರದರ್ಶನಗಳೂ ಮನಮುಟ್ಟುವಂತಿದ್ದು, ಶಿಬಿರಾರ್ಥಿಗಳಿಗೆ ಮಾರ್ಗದರ್ಶಕವಾಗಿದ್ದವು.

ಈ ಸಂದರ್ಭದಲ್ಲಿ ಪ್ರಾಚಾರ್ಯ ಎಸ್ ಜಿ ಕೇಶಣ್ಣವರ, ಆಡಳಿತಾಧಿಕಾರಿ ಎನ್ ಆರ್ ಗೌಡರ, ಕಾರ್ಯಕ್ರಮಾಧಿಕಾರಿ ಡಾ. ಕಲ್ಲಯ್ಯ ಹಿರೇಮಠ ಮತ್ತು ಡಾ. ರತ್ನಾ ಪಾಟೀಲ, ದೈಹಿಕ ನಿರ್ದೇಶಕ ಗೌಡರ, ಸಂಚಾಲಕ ಜಿ ಜಿ ಕೋಟಿ, ಜಿಮಖಾನ ಚೇರಮನ್ ಡಾ. ಡಿ ಎಲ್ ಪವಾರ, ಶಿಕ್ಷಕ ಆರ್ ಕೆ ಬಾಗವಾನ ಮತ್ತು ಸಿಬ್ಬಂದಿಗಳು ಉಪಸ್ಥಿತರಿದ್ದರು.

## ಸಿ ಎಸ್ ಷಡಕ್ಷರಿ ವಿರುದ್ಧ ಅಪಪ್ರಚಾರ: ಕಾನೂನು ಕ್ರಮಕ್ಕೆ ಒತ್ತಾಯ

■ವಿಜಯಸಾಕ್ಷಿ ಸುದ್ದಿ, ಗದಗ



ಕರ್ನಾಟಕ ರಾಜ್ಯ ಸರಕಾರಿ ನೌಕರ ಸಂಘದ ರಾಜ್ಯಾಧ್ಯಕ್ಷ ಸಿ ಎಸ್ ಷಡಕ್ಷರಿ ಅವರ ಹೋರಾಟದಿಂದಾಗಿ ಶೇ.17ರಷ್ಟು ಮಧ್ಯಂತರ ಪರಿಹಾರ ಸೇರಿದಂತೆ ಹಲವು ಬೇಡಿಕೆಗಳು ಈಡೇರುವ ಮೂಲಕ ನೌಕರರ ಹಿತವನ್ನು ಕಾಪಾಡಿದ ಅವರ ವಿರುದ್ಧ ಸಾಮಾಜಿಕ ಜಾಲತಾಣದಲ್ಲಿ ಅಪಪ್ರಚಾರ ಮಾಡುತ್ತಿರುವವರ ವಿರುದ್ಧ ಸೂಕ್ತ ಕಾನೂನು ಕ್ರಮ ಕೈಗೊಳ್ಳುವಂತೆ ಒತ್ತಾಯಿಸಿ ಕರ್ನಾಟಕ ರಾಜ್ಯ ಸರಕಾರಿ ನೌಕರ ಸಂಘದ ರಾಜ್ಯ ಉಪಾಧ್ಯಕ್ಷ ರವಿ ಎಲ್ ಗುಂಜೀಕರ ನೇತೃತ್ವದಲ್ಲಿ ಶುಕ್ರವಾರ ಗದಗ ನಗರ ಚುನಾವಣಾ ತಹಸೀಲ್ದಾರರಾದ ಎಸ್ ಎಮ್ ಹಿರೇಮಠ ಅವರಿಗೆ ಮನವಿ ಸಲ್ಲಿಸಿದರು.

ಸಂಘದ ರಾಜ್ಯಾಧ್ಯಕ್ಷ ಸಿ ಎಸ್ ಷಡಕ್ಷರಿ ಅವರ ವಿರುದ್ಧ ಸಾಮಾಜಿಕ ಜಾಲತಾಣದಲ್ಲಿ ಸುಳ್ಳು ಅಪಪ್ರಚಾರದಲ್ಲಿ ತೊಡಗಿರುವ ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆಯ ಅಧೀನ ಕಾರ್ಯದರ್ಶಿ ಶಾಂತಾರಾಮ, ಶಾಖಾಧಿಕಾರಿ ಗುರುಸ್ವಾಮಿ, ರಾಯಚೂರು ಜಾನುವಾರು ಅಭಿವೃದ್ಧಿ ಅಧಿಕಾರಿ ಮೆಹಬೂಬ ಭಾಷಾ ಎಂ, ಭೂಮಾಪನ ಇಲಾಖೆಯ ಸೂಪರ್‌ವೈಸರ್ ಶಿವರುದ್ರಯ್ಯ ವಿ ವಿ, ಉಪನ್ಯಾಸಕ ನಿಂಗೇಗೌಡ್ರು ಅವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲು ರಾಜ್ಯ ಸರಕಾರಕ್ಕೆ ಶಿಫಾರಸು ಮಾಡುವಂತೆ ಒತ್ತಾಯಿಸಿದರು.

ಮನವಿ ಸ್ವೀಕರಿಸಿದ ಎಸ್ ಎಂ ಹಿರೇಮಠ ಗದಗ ಜಿಲ್ಲಾಧಿಕಾರಿಗಳ ಮೂಲಕ ರಾಜ್ಯ ಸರಕಾರಕ್ಕೆ ಮನವಿಯನ್ನು ರವಾನಿಸುವ ಭರವಸೆಯನ್ನು ನೀಡಿದರು. ಈ ಸಂದರ್ಭದಲ್ಲಿ ಸಂಘದ ಪದಾಧಿಕಾರಿಗಳಾದ ಸಿದ್ದಪ್ಪ ಲಿಂಗದಾಳ, ಮಲ್ಲಿಕಾರ್ಜುನ ಹನಸಿ, ಡಿ ಬಿ ಬೇಲೇರಿ, ಅಜಯ ಕುಮಾರ ಕಲಾಲ, ಮಂಜುನಾಥ, ಮಹಾಂತೇಶ ಚುರ್ಚಿಹಾಳ, ಮೇಲಮನಿ ಸೇರಿದಂತೆ ನೂರಾರು ಸರಕಾರಿ ನೌಕರರಿದ್ದರು.

### 26ನೇ ಗದಗ ಜಿಲ್ಲಾ ಮಟ್ಟದ ಯೋಗಾಸನ ಕ್ರೀಡಾ ಚಾಂಪಿಯನ್‌ಶಿಪ್ ಸ್ಪರ್ಧೆ

# ಮಕ್ಕಳಲ್ಲಿ ಇಚ್ಛಾಶಕ್ತಿ ಬಲಗೊಳ್ಳಲು ಯೋಗಾಸನ ಕ್ರೀಡೆ ಸಹಕಾರಿ



> ಇಂದು ಯಾವದೇ ಕ್ರೀಡಾಪಟುಗಳಿಗೆ ಮತ್ತು ಕ್ರೀಡೆಯನ್ನು ಸಂಘಟಿಸುವ ಸಂಘ-ಸಂಸ್ಥೆಗಳಿಗೆ ಸರಕಾರ ಮತ್ತು ಸಾರ್ವಜನಿಕವಾಗಿ ಹೆಚ್ಚಿನ ಸಹಕಾರ, ಪ್ರೋತ್ಸಾಹಗಳು ದೊರೆತರೆ ಹೆಚ್ಚಿನ ಸಂಖ್ಯೆಯಲ್ಲಿ ಕ್ರೀಡಾಪಟುಗಳು ಬೆಳೆಯುತ್ತಾರೆ. ಅವರಿಂದ ಸುಸಂಸ್ಕೃತ ಸಮಾಜ ನಿರ್ಮಾಣಗೊಳ್ಳುತ್ತದೆ. ಹೆಚ್ಚಿನ ಖರ್ಚಿಲ್ಲದೇ ಸುಲಭ-ಸರಳವಾಗಿ ನಡೆಸಬಹುದಾದ ಯೋಗಾಸನ ಕ್ರೀಡೆಯನ್ನು ನಾವೆಲ್ಲರೂ ಪ್ರೋತ್ಸಾಹಿಸಿ ಬೆಳೆಸೋಣ.
>
> **– ಎಂ ಎಸ್ ಶಿರಿಯಣ್ಣವರ.**
> ಗದಗ ಜಿಲ್ಲಾ ಯೋಗ ಚಿಂತನ ಕೂಟದ ಅಧ್ಯಕ್ಷ.

■ವಿಜಯಸಾಕ್ಷಿ ಸುದ್ದಿ, ಗದಗ

ನಮ್ಮ ಮಕ್ಕಳು ಆಟ-ಪಾಠಗಳಲ್ಲಿ, ಕೆಲಸ-ಕಾರ್ಯಗಳಲ್ಲಿ ಹೆಚ್ಚಿನ ಆಸಕ್ತಿ ತೋರುತ್ತಿಲ್ಲ ಎಂಬುದು ಬಹುಜನ ಪಾಲಕರ ಹಾಗೂ ಶಿಕ್ಷಕರ ಚಿಂತನೆ. ಇಂದಿನ ಮಕ್ಕಳು ದೈಹಿಕ ಶ್ರಮ, ಪೌಷ್ಠಿಕ ಆಹಾರ, ಕ್ರಮಬದ್ಧ ಜೀವನ ಶೈಲಿಗಳ ಅರಿವಿಲ್ಲದ ಕಾರಣ ಆಲಸಿಗಳಾಗಿ ಯಾವುದಕ್ಕೂ ಹೆಚ್ಚಿನ ಆಸಕ್ತಿ ತೋರುತ್ತಿಲ್ಲ. ಮಕ್ಕಳಲ್ಲಿ ಆಸಕ್ತಿ ಮನೋಭಾವ ಮೂಡಲು ಯೋಗಾಸನಗಳು ಪೂರಕವಾಗಿವೆ. ಮಕ್ಕಳು ನಿತ್ಯ ಯೋಗಾಸನ ಸಾಧನೆ ರೂಢಿಸಿಕೊಂಡರೆ ಅವರು ದೈಹಿಕ ಮತ್ತು ಮಾನಸಿಕವಾಗಿ ಆರೋಗ್ಯವಂತರಾಗಿ ಸದಾ ಹುರುಪು, ಹುಮ್ಮನಸ್ಸಿನಿಂದ ಇರುತ್ತಾರೆ ಎಂದು ಗಣ್ಯ ವರ್ತಕ ಸದಾನಂದ ಕಾಮತ ಅಭಿಪ್ರಾಯಪಟ್ಟರು.

ಗದಗ ಜಿಲ್ಲಾ ಅಮೆಚೂರ್ ಯೋಗ ಕ್ರೀಡಾ ಸಂಸ್ಥೆ, ಗದಗ ಜಿಲ್ಲಾ ಯೋಗ ಒಕ್ಕೂಟ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಇವರುಗಳ ಸಹಯೋಗದಲ್ಲಿ ಆಯೋಜಿಸಿದ 26ನೇ ಗದಗ ಜಿಲ್ಲಾ ಮಟ್ಟದ ಯೋಗಾಸನ ಕ್ರೀಡಾ ಚಾಂಪಿಯನ್‌ಶಿಪ್ ಸ್ಪರ್ಧೆಗಳನ್ನು ಉದ್ಘಾಟಿಸಿ ಅವರು ಮಾತನಾಡಿದರು.

ವೇದಿಕೆಯಲ್ಲಿ ಉಪಸ್ಥಿತರಿದ್ದ ಧಾರವಾಡ ಜಿಲ್ಲಾ ಯೋಗ ಕ್ರೀಡಾ ಸಂಸ್ಥೆಯ ಅಧ್ಯಕ್ಷ ಸಂಜೀವಕುಮಾರ ಹಡಗಲಿ ಮಾತನಾಡಿ, ಯೋಗಾಸನ ಕ್ರೀಡೆಯನ್ನು ಒಲಂಪಿಕ್ ಕ್ರೀಡೆಯಲ್ಲಿ ಸೇರ್ಪಡೆ ಮಾಡಬೇಕೆಂಬ ಯೋಜನೆಗಳು ನಡೆದಿವೆ. ಹೀಗಾಗಿ ಭವಿಷ್ಯದಲ್ಲಿ ಯೋಗಾಸನ ಕ್ರೀಡೆಗೆ ಹೆಚ್ಚಿನ ಮಾನ್ಯತೆ ದೊರೆಯುವುದು ಎಂದು ಯೋಗಾಸನ ಕ್ರೀಡೆಗಳ ಮಹತ್ವ ತಿಳಿಸಿದರು.

ಅತಿಥಿಗಳಾಗಿ ಆಗಮಿಸಿದ ಅಕ್ಕಮಹಾದೇವಿ ಯೋಗ ವಿಜ್ಞಾನ ಕೇಂದ್ರದ ಉಪಾಧ್ಯಕ್ಷೆ ವಿಜಯಲಕ್ಷ್ಮೀ ಆನೆಹೊಸೂರ ಪ್ರಾಸ್ತಾವಿಕವಾಗಿ ಮಾತನಾಡಿದರು. ಗದಗ ಜಿಲ್ಲಾ ಅಮೆಚೂರ್ ಯೋಗಾಸನ ಕ್ರೀಡಾ ಸಂಸ್ಥೆ ಅಧ್ಯಕ್ಷ ಕೆ ಎಸ್ ಪಲ್ಲೇದ ಪ್ರಾಸ್ತಾವಿಕ ನುಡಿಗಳನ್ನು ತಿಳಿಸಿ, 26ನೇ ಗದಗ ಜಿಲ್ಲಾ ಮಟ್ಟದ ಯೋಗಾಸನ ಕ್ರೀಡಾ ಚಾಂಪಿಯನ್‌ಶಿಪ್ ಸ್ಪರ್ಧೆಗಳ ನೀತಿ-ನಿಯಮಗಳನ್ನು ತಿಳಿಸಿದರು. ದೈಹಿಕ ಶಿಕ್ಷಣ ಶಿಕ್ಷಕರಾದ ಎಸ್ ಎಂ ಬುರಡಿ ಯೋಗಾಸನ ಕ್ರೀಡಾ ಪ್ರತಿಜ್ಞಾವಿಧಿ ಬೋಧಿಸಿದರು.

ಸಮಾರಂಭದಲ್ಲಿ ಮುಳಗುಂದ, ಮುಂಡರಗಿ, ಪಾಪನಾಶಿ, ಶಿರೋಳ, ಕದಾಂಪೂರ ಮತ್ತು ಜಿಲ್ಲೆಯ ವಿವಿಧ ಭಾಗಗಳಿಂದ ಆಗಮಿಸಿದ ಹಾಗೂ ಸ್ಥಳೀಯ ಕ್ರೀಡಾಪಟುಗಳು, ಯೋಗಾಸಕ್ತರು, ನಿರ್ಣಾಯಕರು ಉಪಸ್ಥಿತರಿದ್ದರು.

ಪ್ರಾರಂಭದಲ್ಲಿ ಸುನಂದಾ ಜ್ಯಾನೋಪಂತರ ಯೋಗ ಪ್ರಾರ್ಥನೆ ಹೇಳಿದರು. ವಿ ಎಂ ಮುಂದಿನಮನಿ ಸ್ವಾಗತಿಸಿದರು. ರವಿ ಉಮಚಗಿ ಕಾರ್ಯಕ್ರಮ ನಿರೂಪಿಸಿದರು. ಚೇತನ ಚುಂಚಾ ವಂದಿಸಿದರು.

## ಮೊಹರಂ ಹಬ್ಬವನ್ನು ಶಾಂತಿಯುತವಾಗಿ ಆಚರಿಸಿ: ಸಿಪಿಐ ಲಮಾಣಿ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ



ಜುಲೈ 28 ಮತ್ತು 29ರಂದು ಪಟ್ಟಣದಲ್ಲಿ ನಡೆಯಲಿರುವ ಮೊಹರಂ ಹಬ್ಬವನ್ನು ಶಾಂತಿಯುತವಾಗಿ ಆಚರಿಸಬೇಕೆಂದು ಶಿರಹಟ್ಟಿ ಸಿಪಿಐ ವಿಕಾಸ್ ಲಮಾಣಿ ಹೇಳಿದರು.

ಅವರು ಶುಕ್ರವಾರ ಶಿರಹಟ್ಟಿಯ ತಾಲೂಕಾ ಪಂಚಾಯತ ಸಭಾಭವನದಲ್ಲಿ ಇಲಾಖೆಯ ವತಿಯಿಂದ ಮೊಹರಂ ಹಬ್ಬದ ಕುರಿತು ಜರುಗಿದ ಶಾಂತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಶಿರಹಟ್ಟಿ ಪಟ್ಟಣವು ಜ.ಫಕೀರೇಶ್ವರರ ತಪೋ ಭೂಮಿಯಾಗಿದ್ದು, ಇಲ್ಲಿ ಎಲ್ಲ ಹಬ್ಬ-ಹರಿದಿನಗಳನ್ನು ಹಿಂದೂ ಮತ್ತು ಮುಸ್ಲಿಂ ಬಾಂಧವರು ಹಿಂದಿನಿಂದಲೂ ಶಾಂತಿಯುತವಾಗಿ ಆಚರಿಸಿಕೊಂಡು ಬರುತ್ತಿದ್ದಾರೆ. ಮುಂದೆಯೂ ಸಹ ಇದೇ ರೀತಿ ಶಾಂತಿಯುತವಾಗಿ ಹಬ್ಬಗಳನ್ನು ಆಚರಿಸಿ ಇಲಾಖೆಗೆ ಸಹಕಾರ ನೀಡಬೇಕು. ಮೆರವಣಿಗೆಯಲ್ಲಿ ಸಾರ್ವಜನಿಕರಿಗೆ ತೊಂದರೆಯಾಗದಂತೆ ಶಾಂತಿ ಮತ್ತು ಸುವ್ಯವಸ್ಥೆಯನ್ನು ಕಾಪಾಡಿಕೊಳ್ಳಬೇಕೆಂದು ಸೂಚಿಸಿದರು.

ಪಿಎಸ್ಐ ಈರಣ್ಣ ರಿತ್ತಿ, ಚಾಂದಸಾಬ ಮುಳಗುಂದ, ಇಸಾಕ ಆದ್ರಳ್ಳಿ, ಬುಡನಶ್ಯಾ ಮಕಾನದಾರ ಮುಂತಾದವರು ಉಪಸ್ಥಿತರಿದ್ದರು.

**ನೀವೂ ನಮ್ಮ ಜೊತೆ ಕೈಜೋಡಿಸಿ**

**'ವಿಜಯಸಾಕ್ಷಿ'**

ನಿಮ್ಮ ಮನೆಯ, ಮನದ ಪತ್ರಿಕೆ ಆಗಲೆಂದು ನಾವು ಬಯಸುತ್ತೇವೆ. ಇಲ್ಲಿ ನಿಮ್ಮ ಅಭಿಪ್ರಾಯ ಹಂಚಿಕೊಳ್ಳಲು ಮುಕ್ತ ಸ್ವಾಗತವಿದೆ.
ನೀವು ಪತ್ರಿಕೆಯ ಕುರಿತು ತಮ್ಮ ಸಲಹೆ, ಮೆಚ್ಚುಗೆ ನಮಗೆ ಬರೆದು ಕಳಿಸಿ..
ಲೇಖನ, ಸಣ್ಣ ಕತೆ, ಕವನ, ಪ್ರಬಂಧ, ಪ್ರವಾಸ ಅನುಭವ ಈ ಕುರಿತು ನೀವೂ ಬರೆಯಬಹುದು.
E-mail: vijayasakshidaily@gmail.com
ಮೊ : 9019256545

# ದೇಶಕ್ಕಾಗಿ ನಿಸ್ವಾರ್ಥ, ಪ್ರಾಮಾಣಿಕ ಸೇವೆ ಸಲ್ಲಿಸಿ

▸▸ಮೊದಲನೇ ಪುಟದಿಂದ

ಭವಿಷ್ಯವನ್ನು ಉತ್ತಮವಾಗಿ ರೂಪಿಸಿಕೊಳ್ಳಬೇಕಿದೆ. ಮೊಬೈಲ್ ಉತ್ಪಾದನೆಯಲ್ಲಿ ಭಾರತ ಪ್ರಪಂಚದಲ್ಲಿ 2ನೇ ಸ್ಥಾನದಲ್ಲಿದ್ದು, ಆಟೋಮೊಬೈಲ್ ಕ್ಷೇತ್ರದಲ್ಲಿ 3ನೇ ಸ್ಥಾನವನ್ನು ಹೊಂದಿದೆ. ಮೇಕ್ ಇನ್ ಇಂಡಿಯಾ, ಮೇಡ ಇನ್ ಇಂಡಿಯಾ ಮೂಲಕ ಸ್ವದೇಶ ಉತ್ಪಾದನೆಗೆ ಹೆಚ್ಚಿನ ಪ್ರೋತ್ಸಾಹ ದೊರೆತಿದೆ.

ಖಾದ್ಯ ತೈಲ, ಸೈನಿಕ ವಸ್ತುಗಳು, ರಸಗೊಬ್ಬರ, ಪೆಟ್ರೋಲಿಯಂ ಸೇರಿದಂತೆ ಹಲವು ಕ್ಷೇತ್ರಗಳಲ್ಲಿ ಸ್ವಾವಲಂಬನೆ ಸಾಧಿಸಬೇಕಿದೆ ಎಂದರು.

ದೇಶದ ರೈಲು ನಿಲ್ದಾಣಗಳು ವಿಮಾನ ನಿಲ್ದಾಣಗಳಂತೆ ಅಭಿವೃದ್ಧಿ ಹೊಂದಿವೆ. ರೈಲ್ವೆ, ವಿಮಾನಯಾನ, ಅಂಚೆ ಇಲಾಖೆ ಸೇರಿದಂತೆ ವಿವಿಧ ಇಲಾಖೆಗಳು ಅಭಿವೃದ್ಧಿಯಾಗುತ್ತಿವೆ. ಮೋದಿ ಅವರ ಸಂಕಲ್ಪದಂತೆ ಮುಂದಿನ 25 ವರ್ಷಗಳಲ್ಲಿ ಭಾರತ ಪ್ರಪಂಚದಲ್ಲಿ ಮೊದಲ ಸ್ಥಾನಕ್ಕೆ ಬರಬೇಕು. ಯುವ ಜನಾಂಗದ ಮೇಲೆ ಬಹಳಷ್ಟು ನಂಬಿಕೆಯಿದೆ. ಅದನ್ನು ಉಳಿಸಿಕೊಳ್ಳುವಲ್ಲಿ ಅವರು ಗಮನಹರಿಸಬೇಕು. ನೀವು ಬೆಳೆಯಿರಿ, ನೀವು ಸೇವೆ ಸಲ್ಲಿಸುವ ಇಲಾಖೆಯನ್ನು ಬೆಳೆಸಿರಿ. ಸೇವೆಗೆ ಸೇರುವ ಇಲಾಖೆಗಳಲ್ಲಿ ಪ್ರಾಮಾಣಿಕವಾಗಿ ಕರ್ತವ್ಯ ನಿರ್ವಹಿಸಿ. ದೇಶದ ಸರ್ವಾಂಗೀಣ ಅಭಿವೃದ್ಧಿಗೆ ಜೊತೆಜೊತೆಯಾಗಿ ಕಾರ್ಯನಿರ್ವಹಿಸೋಣ. ನಿಮ್ಮ ಮುಂದಿನ ಭವಿಷ್ಯ ಉಜ್ವಲವಾಗಿರಲಿ ಎಂದು ಹಾರೈಸಿದರು.

# ಸೌಹಾರ್ದತೆ ಕದಡುವವರ ಮೇಲೆ ನಿರ್ದಾಕ್ಷಿಣ್ಯ ಕ್ರಮ

▸▸ಮೊದಲನೇ ಪುಟದಿಂದ

ಪಟ್ಟಣ ಸೇರಿ ಗ್ರಾಮೀಣ ಪ್ರದೇಶದಲ್ಲಿ ಹಿಂದೂ-ಮುಸ್ಲಿಂ ಬಾಂಧವರೊಡಗೂಡಿ ಆಚರಿಸುತ್ತಾ ಬರುತ್ತಾರೆ. ಲಕ್ಷ್ಮೇಶ್ವರ ಕೋಮು-ಸೌಹಾರ್ದತೆಗೆ ಹೆಸರಾಗಿದ್ದು ಎಲ್ಲರೂ ಸಹೋದರತ್ವ, ಸೌಹಾರ್ದತೆಯ ಭಾವನೆಯಿಂದ ಹಬ್ಬ ಆಚರಿಸೋಣ. ಯಾವುದೇ ಗೊಂದಲ, ಅಹಿತಕರ ಘಟನೆಗೆ ಅವಕಾಶ ಕಲ್ಪಿಸುವುದು ಬೇಡ ಎಂದು ಹೇಳಿದರು.

ಈ ವೇಳೆ ಪಿಎಸ್‌ಐ ಯೋಸೆಫ್ ಜಮೂಲಾ, ಕ್ರೈಂ ಪಿಎಸ್‌ಐ ವಿ.ಜಿ ಪವಾರ, ಎಎಸ್‌ಐ ಟಿ.ಕೆ ರಾಠೋಡ, ನೀಲಪ್ಪ ಶರಸೂರಿ, ಜಾಕೀರ ಹವಾಲ್ದಾರ ಸೇರಿ ಹಿಂದೂ ಮತ್ತು ಮುಸ್ಲಿಂ ಸಮಾಜದ ಮುಖಂಡರಿದ್ದರು.

# ದೂದನಾನಾ ದರ್ಗಾ ಕಮಿಟಿಯಲ್ಲಿ ಅವ್ಯವಹಾರವಾಗಿಲ್ಲ

▸▸ಮೊದಲನೇ ಪುಟದಿಂದ

ಜಾಮಿಯಾ ಮಸೀದಿಯ ಅಧ್ಯಕ್ಷ ಕರೀಂಖಾನವರ ಮಾತನಾಡಿ, ದರ್ಗಾ ಕಮಿಟಿಯಲ್ಲಿ ಯಾವುದೇ ಹಣದ ಅವ್ಯವಹಾರವಾಗಿಲ್ಲ ಮತ್ತು ಯಾವುದೇ ಅಹಿತಕರ ಘಟನೆಯೂ ನಡೆದಿಲ್ಲ ಯಾರಲ್ಲಿಯೂ ತಪ್ಪು ಭಾವನೆ ಬೇಡ ಎಂದರು. ಈ ವೇಳೆ ದರ್ಗಾ ಕಮಿಟಿ ಅಧ್ಯಕ್ಷ ಸುಲೇಮಾನಸಾಬ್ ಕಣಕೆ, ಅನ್ವರಸಾಬ್ ಹವಾಲ್ದಾರ, ದಾದಾಪೀರ ಮುಚ್ಚಾಲೆ, ಎಸ್.ಕೆ ಹವಾಲ್ದಾರ, ಪಿರ್ಧೋಶ ಆಡೂರ, ಪಹೀಮ ಪಲ್ಲಿ, ಸಿಕಂದರ ಕಣಕೆ, ಮುಸ್ತಾಕ್ ಅಹ್ಮದ ಶಿರಹಟ್ಟಿ, ಎಂ.ಎಂ. ಗದಗ, ಜಾಕಿರಹುಸೇನ್ ಹವಾಲ್ದಾರ, ಕರೀಮ್ ಸೂರಣಗಿ, ನೂರಅಹ್ಮದ ಸಿದ್ದಿ ಸೇರಿ ಹಲವರಿದ್ದರು.



ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವ ಮಧು ಬಂಗಾರಪ್ಪನವರಿಗೆ ಅನುದಾನ ರಹಿತ ಶಾಲಾ-ಕಾಲೇಜು ಶಿಕ್ಷಕರ ಸಮಸ್ಯೆಗಳ ಕುರಿತು ಮನವಿ ಸಲ್ಲಿಸಲಾಯಿತು. 1987ರಿಂದ 94-95ರ ಅವಧಿಯಲ್ಲಿ ಅನುದಾನಕ್ಕೆ ಒಳಪಟ್ಟ ಕೆಲ ಶಾಲಾ-ಕಾಲೇಜುಗಳು ತಾಂತ್ರಿಕ ಸಮಸ್ಯೆಯಿಂದ ವೇತನಾನುದಾನ ಬಿಡುಗಡೆಯಾಗದೆ ಸಾಕಷ್ಟು ಶಿಕ್ಷಕರಿಗೆ ಸಮಸ್ಯೆಯಾಗುವ ಕುರಿತು ಡಾ. ಬಸವರಾಜ್ ಧಾರವಾಡ ಸಚಿವರ ಗಮನಕ್ಕೆ ತಂದರು. ಸಮಸ್ಯೆಗಳಿಗೆ ಸ್ಪಂದಿಸುವುದಾಗಿ ಸಚಿವರು ತಿಳಿಸಿದರು. ಈ ಸಂದರ್ಭದಲ್ಲಿ ಪರಮೇಶ್ ಮುಳ್ಳೂರ್ ಮುಂತಾದವರು ಉಪಸ್ಥಿತರಿದ್ದರು.

### ಸನ್ಮಾರ್ಗ ಕಾಲೇಜಿನಲ್ಲಿ ಪ್ರಥಮ ಪಿಯುಸಿ ವಿದ್ಯಾರ್ಥಿಗಳ ಸ್ವಾಗತ ಸಮಾರಂಭದಲ್ಲಿ ಡಾ.ಸಂಕನೂರ

# ಸ್ವ ಸಾಮರ್ಥ್ಯದ ಅರಿವು ಬೆಳೆಸಿಕೊಂಡಾಗಲೇ ಯಶಸ್ಸು

**■ವಿಜಯಸಾಕ್ಷಿ ಸುದ್ದಿ, ಗದಗ**

ಅಧ್ಯಯನ ಮಾಡಬೇಕಾದರೆ ಪ್ರತಿಯೊಬ್ಬ ವಿದ್ಯಾರ್ಥಿಯೂ ದೃಢ ಮನಸ್ಸಿನಿಂದ, ನಿಶ್ಚಲ ಗುಣದಿಂದ, ಏಕಾಗ್ರತೆಯನ್ನು ಮೈಗೂಡಿಸಿಕೊಂಡು, ಸಾಧಿಸಬೇಕಾದ ಗುರಿಯನ್ನು ಮುಂದಿಟ್ಟುಕೊಂಡು ಮುನ್ನಡೆದಾಗ ಸಕಲ ಸಾಧನೆಗಳ ವಾರಸುದಾರರಾಗಲು ಸಾಧ್ಯವಾಗುತ್ತದೆ. ಆ ದಿಸೆಯಲ್ಲಿ ವಿದ್ಯಾರ್ಥಿಗಳು ತಮ್ಮಲ್ಲಿ ಅಡಕವಾಗಿರುವ ಸ್ವ-ಸಾಮರ್ಥ್ಯದ ಅರಿವು ಬೆಳೆಸಿಕೊಂಡು, ಯಶಸ್ಸಿನ ಪಥವನ್ನು ಕಾಣಬೇಕೆಂದು ನಗರದ ಖ್ಯಾತ ಶಸ್ತ್ರಚಿಕಿತ್ಸಕರು, ಎಲುಬು-ಕೀಲುಗಳ ತಜ್ಞರಾದ ಡಾ. ಪ್ರಕಾಶ ಸಂಕನೂರ ಅಭಿಪ್ರಾಯಪಟ್ಟರು.

ಇಲ್ಲಿನ ಸ್ಟೂಡೆಂಟ್ ಎಜ್ಯುಕೇಶನ್ ಸೊಸೈಟಿಯ ಸನ್ಮಾರ್ಗ ಪದವಿಪೂರ್ವ ವಿಜ್ಞಾನ ಮತ್ತು ವಾಣಿಜ್ಯ ಮಹಾವಿದ್ಯಾಲಯದಲ್ಲಿ ಜರುಗಿದ ಪ್ರಥಮ ಪಿಯುಸಿ ವಿದ್ಯಾರ್ಥಿಗಳ ಸ್ವಾಗತ ಸಮಾರಂಭ ಹಾಗೂ 2023-24ನೇ ಸಾಲಿನ ಕಾಲೇಜು ಸಂಸತ್ ಉದ್ಘಾಟಿಸಿ ಮಾತನಾಡಿದರು.

ಪ್ರಾಸ್ತಾವಿಕ ಮಾತುಗಳನ್ನಾಡಿದ ಸಂಸ್ಥೆಯ ನಿರ್ದೇಶಕ ಪ್ರೊ. ರೋಹಿತ ಒಡೆಯರ್ ಕಾಲೇಜಿನ ಗತ ಇತಿಹಾಸವನ್ನು ಸ್ಮರಿಸುತ್ತಾ, ವಿದ್ಯಾರ್ಥಿಗಳ ಸರ್ವತೋಮುಖ ಶೈಕ್ಷಣಿಕ ಪ್ರಗತಿಗೆ ಬೇಕಾದ



ಸಹಾಯವನ್ನು ಮತ್ತು ಪೂರಕ ವಾತಾವರಣವನ್ನು ಪೂರೈಸಲು ಸದಾ ಸಿದ್ಧವಿದ್ದು, ವಿದ್ಯಾರ್ಥಿಗಳು ಅದರ ಸದುಪಯೋಗ ಪಡೆದು ಗುರಿ ತಲುಪಲಿ ಎಂದರು.

ಪ್ರಾಚಾರ್ಯ ಪ್ರೊ. ಪ್ರೇಮಾನಂದ ರೋಣದ ಮಾತನಾಡಿ, ವಿದ್ಯಾರ್ಥಿಗಳಲ್ಲಿ ಶಿಸ್ತು, ಪ್ರಾಮಾಣಿಕತೆ, ದೇಶಾಭಿಮಾನ, ರಾಷ್ಟ್ರಾಭಿಮಾನ ಬೆಳೆಸಿಕೊಂಡು ಅಧ್ಯಯನಶೀಲರಾಗಿ ದೇಶದ ಅಭಿವೃದ್ಧಿಯಲ್ಲಿ ಸೇವೆ ಸಲ್ಲಿಸುವಂತಾಗಲಿ ಎಂದು ಹಾರೈಸಿದರು.

ಸಂಸ್ಥೆಯ ನಿರ್ದೇಶಕರಾದ ಪ್ರೊ. ಉಡುಪಿ ದೇಶಪಾಂಡೆ, ಪ್ರೊ. ರಾಹುಲ್ ಒಡೆಯರ್, ಪ್ರೊ. ಸಯ್ಯದ್ ಮತೀನ್ ಮುಲ್ಲಾ, ಆಡಳಿತಾಧಿಕಾರಿ ಎಂ ಸಿ ಹಿರೇಮಠ ಉಪಸ್ಥಿತರಿದ್ದರು. ವಿಶೃತಾ ಹಿರೇಮಠ ಪ್ರಾರ್ಥನೆಗೈದರು. ಹಿರಿಯ ಉಪನ್ಯಾಸಕ ಪ್ರೊ. ಮುರಲೀಧರ ಸಂಕನೂರ ಸ್ವಾಗತಿಸಿ ಪರಿಚಯಿಸಿದರು. ಸಂಸತ್ ಪದಾಧಿಕಾರಿಗಳಿಗೆ ಪ್ರೊ. ಹೆಚ್ ಎಸ್ ದಳವಾಯಿ ಪ್ರತಿಜ್ಞಾ ವಿಧಿ ಬೋಧಿಸಿದರು. ಪ್ರೊ. ವಿಜಯಲಕ್ಷ್ಮೀ ಲಕ್ಷ್ಮೇಶ್ವರ ಕಾರ್ಯಕ್ರಮ ನಿರೂಪಿಸಿದರು. ಪ್ರೊ. ವಸಂತ ಎಸ್ ಜಿ ವಂದಿಸಿದರು. ನಂತರ ವಿದ್ಯಾರ್ಥಿಗಳಿಂದ ವಿವಿಧ ಮನರಂಜನಾ ಕಾರ್ಯಕ್ರಮಗಳು ಜರುಗಿದವು.

> ಮನೋದೃಢತೆಯೊಂದಿಗೆ ನಿರಂತರ ಪರಿಶ್ರಮದಲ್ಲಿ ವಿದ್ಯಾರ್ಥಿಗಳು ತೊಡಗಿದರೆ ಯಶಸ್ಸು ನಿಶ್ಚಿತ. ಉಜ್ವಲ ಭವಿಷ್ಯವನ್ನು ನಿರ್ಮಿಸಿಕೊಳ್ಳಲು ಮತ್ತು ಸಮಾಜಕ್ಕೆ ಶ್ರೇಷ್ಠ ಸಂಪನ್ಮೂಲದ ಗಣಿಯಾಗಿ ಹೊರಹೊಮ್ಮಲು ಸದ್ಗುಣಗಳನ್ನು ಬಿತ್ತಿಕೊಳ್ಳಬೇಕು.
>
> **– ಪ್ರೊ. ರಾಜೇಶ ಕುಲಕರ್ಣಿ.**
> ಚೇರಮನ್, ಸ್ಟೂಡೆಂಟ್ ಎಜ್ಯುಕೇಶನ್ ಸೊಸೈಟಿ.

# ರೈತರನ್ನು ಕಡೆಗಣಿಸಿದರೆ ಅನ್ನಕ್ಕೆ ಕುತ್ತು



**■ವಿಜಯಸಾಕ್ಷಿ ಸುದ್ದಿ, ಗದಗ**

ರೈತರ ಸಮಸ್ಯೆಗಳಿಗೆ ಧ್ವನಿಯಾಗಿ ಕೇಂದ್ರ ಸರ್ಕಾರ ಮತ್ತು ರಾಜ್ಯ ಸರ್ಕಾರಗಳು ಕೆಲಸ ಮಾಡುವ ಮೂಲಕ ದೇಶಕ್ಕೆ ಅನ್ನ ನೀಡುವ ಅನ್ನದಾತರ ಬೇಡಿಕೆಗಳಿಗೆ ಸ್ಪಂದಿಸಬೇಕು.

ರೈತ ಕುಲವನ್ನು ಕಡೆಗಣಿಸಿದರೆ ಬರುವ ದಿನಮಾನಗಳಲ್ಲಿ ಅನ್ನಕ್ಕೆ ಕುತ್ತು ಬರುವುದು ಸಂಶಯವಿಲ್ಲ ಎಂದು ಕರ್ನಾಟಕ ರಾಜ್ಯ ರೈತ ಸಂಘದ ಗದಗ ಜಿಲ್ಲಾ ಅಧ್ಯಕ್ಷ ಯಲ್ಲಪ್ಪ ಎಚ್ ಬಾಬರಿ ಹೇಳಿದರು.

ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ತಿಮ್ಮಾಪೂರ ಗ್ರಾಮ ಘಟಕದಿಂದ ಆಯೋಜಿಸಿದ್ದ 43ನೇ ರೈತ ಹುತಾತ್ಮ ದಿನಾಚರಣೆ ಕಾರ್ಯಕ್ರಮವನ್ನು ನಾಮಫಲಕಕ್ಕೆ ಪೂಜೆ ಸಲ್ಲಿಸಿ ಅವರು ಮಾತನಾಡಿದರು.

ರೈತರಿಗೆ ಮಾರಕವಾಗಿರುವ ಕೃಷಿ ಕಾಯಿದೆಗಳನ್ನು ಹಿಂದೆ ಪಡೆಯುವಂತೆ ಆಗ್ರಹಿಸಿದ್ದರ ಪರಿಣಾಮವಾಗಿ ರಾಜ್ಯದಲ್ಲಿ ಎಪಿಎಂಸಿ ಕಾಯ್ದೆಯನ್ನು ಸರ್ಕಾರ ಹಿಂಪಡೆದಿದೆ, ಇದು ರೈತ ಸಂಘದ ಹೋರಾಟಕ್ಕೆ ಸಂದ ಜಯವಾಗಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಗ್ರಾಮ ಘಟಕದ ಅಧ್ಯಕ್ಷ ಹುಚ್ಚೀರಪ್ಪ ಜೋಗಿನ, ಗಿರೀಶ್ ಗುಡ್ಲಾನೂರ, ರಾಮಣ್ಣ ಖಂಡ್ರಿ, ಶ್ರೀಕಾಂತ ಬಾಬರಿ, ಶರಣಪ್ಪ ಜೋಗಿನ, ಫಕೀರಪ್ಪ ಗುಡ್ಲಾನೂರ, ಚಿನ್ನಪ್ಪ ಬಿಸನಳ್ಳಿ, ರವಿ ಬಿಕನಳ್ಳಿ, ಮಾರುತಿ ಇದ್ಲಿ, ಮಾರುತಿ ಜೋಗಿನ ಹಾಗೂ ಅನೇಕ ರೈತರು ಪಾಲ್ಗೊಂಡಿದ್ದರು.

# ಕಾಂಗ್ರೆಸ್ ಸರ್ಕಾರದ ನಡೆ ಖಂಡನೀಯ

▸▸ಮೊದಲನೇ ಪುಟದಿಂದ

ಕುಲಕರ್ಣಿ ಸಾಂದರ್ಭಿಕವಾಗಿ ಮಾತನಾಡಿದರು. ಸಿದ್ರಾಮಪ್ಪ ಮೊರಬದ, ಮಂಜುನಾಥ ಮೆಣಸಗಿ, ಕಾಂತೀಲಾಲ ಬನ್ಸಾಲಿ, ಸಂಗಮೇಶ ದುಂದೂರ, ಅಶೋಕ ಸಂಕಣ್ಣವರ, ಭೀಮಸಿಂಗ ರಾಠೋಡ್, ಅಶೋಕ ಕುಡತಿನಿ, ಬಿ.ಎಸ್.ಚಿಂಚಲಿ, ಬೂದಪ್ಪ ಹಳ್ಳಿ, ರಾಜಣ್ಣ ಕುಲಕರ್ಣಿ, ಇರ್ಷಾದ ಮಾನ್ವಿ, ನಿಂಗಪ್ಪ ಮಣ್ಣೂರ, ರಮೇಶ ಸಜ್ಜಗಾರ, ಮುತ್ತು ಮುಶಿಗೇರಿ, ಮಂಜುನಾಥ ಶಾತಗೇರಿ, ವೆಂಕಟೇಶ ಹಬೀಬ, ಹನಮಂತಪ್ಪ ದಿಂಡೆಣ್ಣವರ, ಅಶೋಕ ಕರೂರ, ಮಂಜು ಮುಳಗುಂದ, ಸುರೇಶ ಚಿತ್ತರಗಿ, ಉಷಾ ದಾಸರ, ವಿಜಯಲಕ್ಷ್ಮೀ ದಿಂಡೂರ, ಸುನಂದಾ ಬಾಕಳೆ, ವಿದ್ಯಾವತಿ ಗಡಗಿ, ನಿರ್ಮಲಾ ಕೊಳ್ಳಿ, ಸ್ವಾತಿ ಅಕ್ಕಿ, ಜಯಶ್ರೀ ಉಗಲಾಟದ, ವಂದನಾ ವರ್ಣೇಕರ್, ಕಸ್ತೂರಿ ಕಮ್ಮಾರ, ದೀಪಾ ಚೌಡಾಪೂರ, ಮೇಗನಾ ಕೊಟ್ಟೂರ, ಸುಮಂಗಲಾ ಕೊನೆವಾಲ, ಶಿವಲೀಲಾ ಉಮಚಗಿ, ಕಮಲಾಕ್ಷೀ ತಕ್ಕಲಕೋಟಿ, ರೇಖಾ ಬಂಗಾರಶೆಟ್ಟರ, ಅಮರನಾಥ ಗಡಗಿ, ರಾಚಯ್ಯ ಹೊಸಮಠ, ಕೊಟ್ರೇಶ ಕುರವಿನಶೆಟ್ಟಿ, ಶಿವು ಕರೀಗೌಡ್ರ, ಅಂದಪ್ಪ ಹುಂಬಿ, ಈರಪ್ಪ ಕಣಗಿನಹಾಳ, ಮಹಾಂತೇಶಗೌಡ ಬೆನಹಾಳ, ರಾಜೇಶ ಕಟ್ಟಿಮನಿ, ಪ್ರಕಾಶ ಮೂಲಿಮನಿ, ಶರಣಪ್ಪ ಬಳ್ಳೊಳ್ಳಿ, ರವಿ ದೇಶಣ್ಣವರ, ವಿನೋದ ಹಂಸನೂರ ಮುಂತಾದವರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

> ರೈತರ ಮಕ್ಕಳಿಗೆ, ನೇಕಾರರಿಗೆ, ಆಟೋ, ಟ್ಯಾಕ್ಸಿ, ಕ್ಯಾಬ್, ಡ್ರೈವರ್‌ಗಳು, ಮೀನುಗಾರರ ಮಕ್ಕಳಿಗೆ ನೀಡುತ್ತಿರುವ ವಿದ್ಯಾರ್ಥಿವೇತನವನ್ನು ನಿಲ್ಲಿಸಿರುವುದು, ಬಿಜೆಪಿ ಸರ್ಕಾರ ಮಾಡಿರುವ ಒಳ್ಳೆಯ ಕಾರ್ಯಗಳನ್ನು ನಿಲ್ಲಿಸಿ, ತಾವು ಮಾಡಿದ ಕೆಲಸಗಳು ಮಾತ್ರ ಶ್ರೇಷ್ಠ ಎಂಬಂತೆ ಕಾಂಗ್ರೆಸ್ ಸರ್ಕಾರ ವರ್ತಿಸುತ್ತಿದೆ. ಸ್ಪೀಕರ್ ಹುದ್ದೆಯ ಸಾಂವಿಧಾನಿಕ ಮಹತ್ವವನ್ನು ಮರೆತು ಕಾಂಗ್ರೆಸ್ ಹಾಗೂ ಇನ್ನಿತರ ಪಕ್ಷಗಳ ಮಹಾಘಟಬಂಧನ ಸಭೆಗೆ ಹೋಗಿ, ಸೋನಿಯಾ ಗಾಂಧಿ ಅವರಿಗಾಗಿ ಅರ್ಧ ಗಂಟೆ ಕಾದು ಭೋಜನ ಸವಿದು ಬಂದಿದ್ದಾರೆ. ಈ ಕೂಡಲೇ ಅವರು ತಮ್ಮ ಸ್ಥಾನದಿಂದ ಕೆಳಗಿಳಯಬೇಕು.
>
> **– ಎಸ್. ವಿ ಸಂಕನೂರ.**
> ವಿಧಾನ ಪರಿಚತ್ ಸದಸ್ಯರು.

# ಧರ್ಮವೊಂದೇ ಆಶಾಕಿರಣ: ರಂಭಾಪುರಿ ಶ್ರೀ

**■ವಿಜಯಸಾಕ್ಷಿ ಸುದ್ದಿ, ದಾವಣಗೆರೆ**

ನೀತಿ-ನಿಯಮಗಳು ಜೀವನದ ಉನ್ನತಿಗೆ ಮೂಲ. ಹಗಲು ಸೂರ್ಯ, ರಾತ್ರಿ ಚಂದ್ರ ಬೆಳಕು ಕೊಡಬಲ್ಲ. ಆದರೆ ಸರ್ವ ಕಾಲಕ್ಕೂ ಸರ್ವರಿಗೂ ಬೆಳಕು ನೀಡುವ ಧರ್ಮವೊಂದೇ ಆಶಾಕಿರಣ ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಶನಿವಾರ ತಾಲೂಕಿನ ನಾಗರಸನಹಳ್ಳಿ ಗ್ರಾಮದ ಶ್ರೀ ವೀರಭದ್ರೇಶ್ವರ ಸಮುದಾಯ ಭವನದಲ್ಲಿ ಇಷ್ಟಲಿಂಗ ಮಹಾಪೂಜಾ ನೆರವೇರಿಸಿ ಆಶೀರ್ವಚನ ನೀಡುತ್ತಿದ್ದರು.

ಮಾನವನ ಬದುಕು ಬಹಳಷ್ಟು ಒತ್ತಡಗಳಿಂದ ಕೂಡಿದೆ. ಜರ್ಜರಿತ ಮನಕ್ಕೆ ಶಾಂತಿ-ನೆಮ್ಮದಿ ಮರೀಚಿಕೆಯಾಗಿದೆ. ಧರ್ಮ ಕೊಡುವ ಫಲಗಳನ್ನು ಬಯಸುವ ಮನುಷ್ಯ ಆ ಧರ್ಮದ ಪರಿಪಾಲನೆ ಮಾಡುತ್ತಿಲ್ಲ. ಹೀಗಾಗಿ ಮನುಷ್ಯನ ಜೀವನ ಅಸಮಾಧಾನ, ಅತೃಪ್ತಿಯಿಂದ ಕೂಡಿದೆ. ಶಿವನನ್ನು ಪೂಜಿಸಿದರೆ



ಸಕಲ ದೇವಾನುದೇವತೆಗಳನ್ನು ಪೂಜಿಸಿದ ಫಲ ಪ್ರಾಪ್ತವಾಗುತ್ತದೆ. ಶ್ರೀ ಜಗದ್ಗುರು ರೇಣುಕಾಚಾರ್ಯರು ಇಷ್ಟಲಿಂಗದಲ್ಲಿರುವ ಅದ್ಭುತ ಶಕ್ತಿಯನ್ನು ಪ್ರತಿಪಾದಿಸಿದ್ದಾರೆ. ಬೇಡಿದವರಿಗೆ ಬೇಡಿದ ಇಷ್ಟಾರ್ಥಗಳನ್ನು ಕೊಡುವ ಶಕ್ತಿಯಿದೆ. ಶ್ರೀ ಗುರುವಿನಿಂದ ಶಿವದೀಕ್ಷಾ ಸಂಪನ್ನನಾಗಿ ಮೋಕ್ಷದಾಯಕವಾದ ಶಿವ ಪಂಚಾಕ್ಷರಿ ಮಂತ್ರ ಜಪಿಸಿ ಜೀವನ್ಮುಕ್ತನಾಗುವುದನ್ನು ರೇಣುಕ ಗೀತೆಯಲ್ಲಿ ನಿರೂಪಿಸಿದ್ದಾರೆ ಎಂದರು.

ಹರಪನಹಳ್ಳಿ ವರಸದ್ಯೋಜಾತ ಶಿವಾಚಾರ್ಯ ಸ್ವಾಮಿಗಳು ಮತ್ತು ರಾಮಘಟ್ಟದ ರೇವಣಸಿದ್ಧ ಶಿವಾಚಾರ್ಯ ಸ್ವಾಮಿಗಳು ಪಾಲ್ಗೊಂಡು ನುಡಿ ನಮನ ಸಲ್ಲಿಸಿದರು. ಬಿಜೆಪಿ ಯುವ ಧುರೀಣ ಅಜಿತ ಕುಮಾರ್, ತೇಜಸ್ವಿ ಪಟೇಲ್, ಎಸ್ ಬಿ ಅಜಯನ್, ಬಿ ಜಿ ಅಜಯಕುಮಾರ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡಿದ್ದರು. ಶ್ಯಾಗಲೆ ಕೆ ಎಂ ಮಂಜುನಾಥ ನಿರೂಪಿಸಿದರು. ಡಿ ಆರ್ ಧನಂಜಯ ಸ್ವಾಗತಿಸಿದರು. ಎಂ ವಿ ರುದ್ರೇಶ ವಂದನಾರ್ಪಣೆ ಸಲ್ಲಿಸಿದರು.

# ಅಂಗನವಾಡಿಗೆ ತೆರಳಲು ಚಿಣ್ಣರ ಪರದಾಟ

**■ವಿಜಯಸಾಕ್ಷಿ ಸುದ್ದಿ, ಮುಳಗುಂದ**

ಸತತವಾಗಿ ಸುರಿಯುತ್ತಿರುವ ಜಿಟಿ ಜಿಟಿ ಮಳೆಯಿಂದ ರಸ್ತೆಗಳು ಕೆಸರು ಗದ್ದೆಗಳಂತಾಗಿದ್ದು, ಅಂಗನವಾಡಿ ಮಕ್ಕಳು ಶಾಲೆಗೆ ತೆರಳಲು ಹಿಂದೇಟು ಹಾಕುವಂತಾಗಿದೆ.

ಪಟ್ಟಣದ ಚಿಂದಿಪೇಟಿ ಓಣಿಯಲ್ಲಿ ಹೊಸದಾಗಿ ಪ್ರಾರಂಭವಾಗಿರುವ ಅಂಗನವಾಡಿಗೆ ಸಂಪರ್ಕ ರಸ್ತೆ ಇಲ್ಲದೇ ಮಕ್ಕಳು ನಿತ್ಯ ಪರದಾಡುವಂತಾಗಿದೆ. ಪಾಲಕರೂ ಸೇರಿದಂತೆ ಮಕ್ಕಳು ಕೆಸರು ರಸ್ತೆಯಲ್ಲಿ ನಿತ್ಯವೂ ಬೀಳುತ್ತಿದ್ದು, ಸಾಂಕ್ರಾಮಿಕ ರೋಗಗಳ ಭಯವೂ ಕಾಡುತ್ತಿದೆ. ಇದರಿಂದ ಪಾಲಕರು ಮಕ್ಕಳನ್ನು ಅಂಗನವಾಡಿಗೆ ಕಳಿಸಲು



ಹಿಂದೇಟು ಹಾಕುತ್ತಿದ್ದು, ಪ ಪಂ ಅಧಿಕಾರಿಗಳು ಈ ರಸ್ತೆಯನ್ನು ದುರಸ್ತಿ ಮಾಡದಿದ್ದಲ್ಲಿ ಪ ಪಂ ಕಚೇರಿಯೆದುರು ಪ್ರತಿಭಟನೆ ನಡೆಸುವುದಾಗಿ ಸಾರ್ವಜನಿಕರು ತಿಳಿಸಿದ್ದಾರೆ.

# ವಿದ್ಯುತ್ ಅವಘಡದಿಂದ ಮೃತಪಟ್ಟ ಜಾನುವಾರುಗಳು



**■ವಿಜಯಸಾಕ್ಷಿ ಸುದ್ದಿ, ಹರಪನಹಳ್ಳಿ**

ವಿದ್ಯುತ್ ಅವಘಡದಿಂದ ಎರಡು ಹಸು ಹಾಗೂ ನಾಲ್ಕು ಕರುಗಳು ಸುಟ್ಟು ಸ್ಥಳದಲ್ಲೇ ಮೃತಪಟ್ಟ ಘಟನೆ ಪಟ್ಟಣದ ಅಯ್ಯನಕೆರೆ ಬಳಿ ಶುಕ್ರವಾರ ಜರುಗಿದೆ. ಗೌಳಿ ನಾಗಪ್ಪ ಅವರಿಗೆ ಸೇರಿದ್ದ ದನದ ಕೊಟ್ಟಿಗೆಯಲ್ಲಿಯ ಜಾನುವಾರುಗಳಿಗೆ ಎಂದಿನಂತೆ ಅವರ ಮಗ ಗೌಳಿ ನಿಂಗಪ್ಪ ಗುರುವಾರ ರಾತ್ರಿ ಮೇವು, ನೀರು ಹಾಕಿ ಮನೆಗೆ ಹೋಗಿದ್ದಾರೆ. ಬೆಳಿಗ್ಗೆ ಬಂದು ನೋಡಿದಾಗ ಎರಡು ಹಸುಗಳು ಹಾಗೂ ನಾಲ್ಕು ಕರುಗಳು ಮೃತಪಟ್ಟಿವೆ. ಐದಾರು ಲಕ್ಷದ ರಾಸುಗಳು ವಿದ್ಯುತ್‌ನಿಂದ ಉಂಟಾದ ಅವಘಡಕ್ಕೆ ಬಲಿಯಾಗಿವೆ.

ತಹಸೀಲ್ದಾರ ಡಾ.ಶಿವಕುಮಾರ ಬಿರಾದಾರ, ಪಶುವೈದ್ಯಾಧಿಕಾರಿ ಡಾ.ಶಿವಕುಮಾರ, ಬೆಸ್ಕಾಂ ಅಭಿಯಂತರರು ಹಾಗೂ ಪಿಎಸ್‌ಐ ಶಾಂತಮೂರ್ತಿ ಸ್ಥಳಕ್ಕೆ ಬೇಟಿ ನೀಡಿ ಪರಿಶೀಲಿಸಿದ್ದಾರೆ.



ನಗರದ ವಿದ್ಯಾದಾನ ಸಮಿತಿ ಕ್ಲಾಸಿಕ್ ಪ್ರಾಥಮಿಕ ಆಂಗ್ಲ ಮಾಧ್ಯಮ ಶಾಲೆಯಲ್ಲಿ "ಅಂಬ್ರೆಲಾ ಡೇ" ಆಚರಿಸಲಾಯಿತು, ಈ ಸಂದರ್ಭದಲ್ಲಿ ಸಂಸ್ಥೆಯ ಕಾರ್ಯದರ್ಶಿ ಶ್ರೀನಿವಾಸ. ಭೀ. ಹುಯಿಲಗೋಳ, ನಿರ್ದೇಶಕರಾದ ಪ್ರತೀಕ. ಎಸ್. ಹುಯಿಲಗೋಳ, ಮುಖ್ಯೋಪಾಧ್ಯಾಯರಾದ ಎಂ. ಆರ್. ಡೊಳ್ಳಿನ, ಶಾಲೆಯ ಸಮಸ್ತ ಶಿಕ್ಷಕ/ಸಿಬ್ಬಂದಿ ವರ್ಗದವರು ಹಾಗೂ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

### ತಾಲೂಕಿನಾದ್ಯಂತ 38 ಕೇಂದ್ರಗಳಲ್ಲಿ ಅರ್ಜಿ ಸ್ವೀಕಾರ

# ಸುಸೂತ್ರವಾಗಿ ಸಾಗಿದ ಗೃಹಲಕ್ಷ್ಮೀ ಯೋಜನೆಯ ನೋಂದಣಿ ಕಾರ್ಯ



**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಗೃಹಲಕ್ಷ್ಮಿ ಯೋಜನೆಗೆ ಅರ್ಜಿ ಸಲ್ಲಿಸುವಲ್ಲಿ ಉಂಟಾಗಿದ್ದ ಹಲವಾರು ತೊಡಕುಗಳನ್ನು ಸರಳೀಕರಣಗೊಳಿಸಿದ ಹಿನ್ನಲೆಯಲ್ಲಿ ಶನಿವಾರ ಪಟ್ಟಣ ಸೇರಿ ಗ್ರಾಮೀಣ ಪ್ರದೇಶಗಳಲ್ಲಿ ಅರ್ಜಿ ಸಲ್ಲಿಕೆ ಬಹುತೇಕ ಸುಸೂತ್ರವಾಗಿ ಸಾಗಿದೆ.

ಆದಾಗ್ಯೂ ಕೆಲವು ಕಡೆ ಹೆಚ್ಚಿನ ಸಂಖ್ಯೆಯಲ್ಲಿ ಸೇರಿದ್ದ ಫಲಾನುಭವಿಗಳು, ತಾಂತ್ರಿಕ ತೊಂದರೆ, ಸರ್ವರ್ ಬ್ಯೂಸಿಯಿಂದ ಕೆಲ ಕಡೆ ನೂಕುನುಗ್ಗಲು ಉಂಟಾಗಿದ್ದು ಕಂಡು ಬಂದಿತು. ಪುರಸಭೆ, ತಾಪಂ, ಗ್ರಾಪಂ, ಕರ್ನಾಟಕ ಒನ್, ಗ್ರಾಮ ಒನ್, ಬಾಪೂಜಿ ಸೇವಾ ಕೇಂದ್ರಗಳಲ್ಲಿ ಜಿಲ್ಲೆಯಾದ್ಯಂತ ಎಲ್ಲಿಯಾದರೂ ಅರ್ಜಿ ಸಲ್ಲಿಸುವ ಅವಕಾಶ ಕೊಟ್ಟಿದ್ದರಿಂದ ಫಲಾನುಭವಿಗಳಿಗೆ ಅರ್ಜಿ ಸಲ್ಲಿಕೆಗೆ ಅನಕೂಲವಾಯಿತು.

ಗ್ರಾಮೀಣ ಪ್ರದೇಶಗಳಲ್ಲಿನ ಗ್ರಾಪಂ ಮತ್ತು ಗ್ರಾಮ ಒನ್‌ಗಳಲ್ಲಿ 200 ಕ್ಕೂ ಹೆಚ್ಚು ಅರ್ಜಿಗಳು ಸ್ವೀಕೃತವಾಗಿವೆ. ಪಟ್ಟಣದ ಕರ್ನಾಟಕ ಒನ್ ಸೇವಾ ಕೇಂದ್ರದಲ್ಲೂ 300ಕ್ಕೂ ಹೆಚ್ಚು ಅರ್ಜಿಗಳು ಸ್ವೀಕೃತವಾಗಿವೆ.

ಲಕ್ಷ್ಮೇಶ್ವರ ಪಟ್ಟಣದಲ್ಲಿ ಪುರಸಭೆ, ತಾಲೂಕಾ ಪಂಚಾಯತ ಮತ್ತು ಎಪಿಎಂಸಿ ಕಟ್ಟಡದಲ್ಲಿ ಪ್ರಾರಂಭಿಸಲಾದ ಅರ್ಜಿ ಸ್ವೀಕೃತಿ ಸೇವಾ ಕೇಂದ್ರಗಳು ಶನಿವಾರ ತಾಂತ್ರಿಕ ತೊಂದರೆಯಿಂದ ಅರ್ಜಿ ಸ್ವೀಕೃತಿ ಕಾರ್ಯ ಪ್ರಾರಂಭಿಸಿಲ್ಲ. ಇದರಿಂದ ಪಟ್ಟಣದಲ್ಲಿ ಕಾರ್ಯಾರಂಭ ಮಾಡಿದ್ದ ಕೇವಲ 2 ಕರ್ನಾಟಕ ಒನ್ ಕೇಂದ್ರಗಳಲ್ಲಿ ನೂಕುನುಗ್ಗಲು ಕಂಡು ಬಂದಿತು.

ಈ ವೇಳೆ ಸಾಕಷ್ಟು ಗೊಂದಲಕ್ಕೊಳಗಾದ ಕೇಂದ್ರದ ಸಿಬ್ಬಂದಿ ಬಾಗಿಲು ಬಂದ್ ಮಾಡಿ ಜಮಾಯಿಸಿದ್ದ ಎಲ್ಲರಿಗೂ ಪಾಳೀ ಚೀಟಿ ನೀಡಿ ಸರದಿ ಸಾಲಿನಲ್ಲಿ ನಿಲ್ಲಿಸಿ ಅರ್ಜಿ ಸ್ವೀಕರಿಸಲಾಯಿತು.

ಲಕ್ಷ್ಮೇಶ್ವರದಲ್ಲಿ ಪುರಸಭೆ, ತಾಲೂಕು ಪಂಚಾಯತಿ, ಎಪಿಎಂಸಿ ಕಟ್ಟಡ ಮತ್ತು 2 ಕರ್ನಾಟಕ ಒನ್ ಸೇರಿ 5 ಕಡೆ, ಗ್ರಾಮೀಣ ಪ್ರದೇಶಗಳಲ್ಲಿ 19 ಗ್ರಾಪಂ ಕಾರ್ಯಾಲಯ, 14 ಬಾಪೂಜಿ ಸೇವಾ ಕೇಂದ್ರಗಳಲ್ಲಿ ಅರ್ಜಿ ಸ್ವೀಕರಿಸಲಾಗುತ್ತಿದೆ. ಶನಿವಾರ ಪಟ್ಟಣದಲ್ಲಿ ಕರ್ನಾಟಕ ಒನ್ ಕೇಂದ್ರದಲ್ಲಿ ಮಾತ್ರ ಅರ್ಜಿ ಸ್ವೀಕರಿಸಲಾಗಿದ್ದು ಸೋಮವಾರದಿಂದ ಎಲ್ಲ ಕೇಂದ್ರಗಳಲ್ಲಿ ಅರ್ಜಿ ಸ್ವೀಕೃತಿ ಕಾರ್ಯ ನಡೆಯಲಿದೆ. ಅರ್ಜಿ ಸಲ್ಲಿಕೆಗೆ ಕೊನೆಯ ದಿನಾಂಕ ನಿಗದಿಯಿಲ್ಲ ಆದ್ದರಿಂದ ಯಾರೂ ಅವಸರ, ಆತಂಕಕ್ಕೊಳಗಾಗಬೇಡಿ ಎಂದು ತಹಸೀಲ್ದಾರ ಕೆ. ಆನಂದಶೀಲ ಹೇಳಿದರು.



> ಜು.19 ರಿಂದ 21ರವರೆಗೆ ತಾಂತ್ರಿಕ ತೊಂದರೆ, ಸರ್ವರ್ ಸಮಸ್ಯೆಯಿಂದ ಅರ್ಜಿಗಳ ಸ್ವೀಕೃತಿ ಸಂಖ್ಯೆ(3000) ಕಡಿಮೆಯಾಗಿತ್ತು. ಶನಿವಾರವಷ್ಟೇ ಲಕ್ಷ್ಮೇಶ್ವರ ಮತ್ತು ಶಿರಹಟ್ಟಿ ತಾಲೂಕಿನಾದ್ಯಂತ 4000ಕ್ಕೂ ಹೆಚ್ಚು ಅರ್ಜಿಗಳು ಸ್ವೀಕೃತವಾಗಿದ್ದು ಎಲ್ಲಿಯೂ ಸಮಸ್ಯೆ ಕಂಡು ಬಂದಿಲ್ಲ ಎಂದರು.
>
> **– ಮೃತ್ಯುಂಜಯ ಗುಡ್ಡದನ್ವೇರಿ,** ಗೃಹಲಕ್ಷ್ಮಿ ಯೋಜನೆಯ ಮಂಜೂರಾತಿ ಅಧಿಕಾರಿ.

# ಪರಿಸರ ಸಂರಕ್ಷಣೆ ನಮ್ಮೆಲ್ಲರ ಹೊಣೆ



■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಪರಿಸರ ಸಂರಕ್ಷಣೆ ಪ್ರತಿಯೊಬ್ಬರ ಹೊಣೆಯಾಗಿದೆ. ಜಿಲ್ಲಾದ್ಯಂತ 50 ಗ್ರಾಮಗಳಲ್ಲಿ ಸಸಿ ನೆಡುವ ಮೂಲಕ ಪರಿಸರ ಜಾಗೃತಿ ಹಮ್ಮಿಕೊಂಡಿದ್ದು, ಸಾರ್ವಜನಿಕರು ಪರಿಸರ ಸಂರಕ್ಷಣೆಗೆ ಕೈಜೋಡಿಸಿದಾಗ ಪರಿಸರ ಉಳಿಯಲು ಸಾಧ್ಯವಾಗುತ್ತದೆ ಎಂದು ರಿಲಾಯನ್ಸ್ ಫೌಂಡೇಶನ್ ಸಂಸ್ಥೆಯ ಅಧಿಕಾರಿ ಓಂಪ್ರಕಾಶ ಪಾಟೀಲ್ ಹೇಳಿದರು.

ಅವರು ನಾಗಾವಿ ಗ್ರಾಮದ ವಿರುಪಾಕ್ಷಪ್ಪಾ ಚಿಂಚಲಿ ಸರಕಾರಿ ಪ್ರೌಢಶಾಲೆಯ ಆವರಣದಲ್ಲಿ ವನಮಹೋತ್ಸವ ಕಾರ್ಯಕ್ರಮ ಅಂಗವಾಗಿ ರಿಲಾಯನ್ಸ್ ಫೌಂಡೇಶನ್ ಸಂಸ್ಥೆಯಿಂದ ಹಮ್ಮಿಕೊಂಡಿದ್ದ ಪರಿಸರ ಜಾಗೃತಿ ಕಾರ್ಯಕ್ರಮದಲ್ಲಿ ಮಾತನಾಡಿದರು.

ಸಸ್ಥೆಯ ಸಿಬ್ಬಂದಿ ಎಂ ಎ ನದಾಫ್, ಮುತ್ತಣ್ಣಾ ಗೊರವರ, ಎಸ್‌ಡಿಎಂಸಿ ಅಧ್ಯಕ್ಷ ದೇವರೆಡ್ಡಿ ಶಿದ್ನೇಕೊಪ್ಪ, ಇಂದ್ರವ್ವ ಮರೆಡ್ಡಿ, ಬಿ ಆರ್ ದೇವರೆಡ್ಡಿ, ಲಕ್ಷ್ಮವ್ವ ಕಣವಿ, ಪ್ರೇಮಾ ಮರೆಡ್ಡಿ, ಎಂ ಎಂ ತಾಮ್ರಗುಂಡಿ, ಪಾರವ್ವ ಗೊರವರ, ಅಲ್ಲಾಸಾಬ ಫಿರಖಾನವರ, ಶಾಲಾ ಪ್ರಧಾನ ಗುರುಮಾತೆ ಜೆ ಎಂ ಮುತ್ತಿನಪೆಂಡಿಮಠ, ಎ ಬಿ ಗುರ್ಲಹೊಸೂರ, ಎಂ ಎಂ ಬಾಗಲಿ, ಎ ಎ ಬಂಡಿವಾಡಮಠ, ಜೆ ಎಸ್ ಛಲವಾದಿ, ವಿ ಎಂ ಖ್ಯಾಡದ, ಎಸ್ ಎಸ್ ಹತ್ತಿ, ಎಂ ವಿ ಹಿರೇಮಠ ಮುಂತಾದವರಿದ್ದರು.

ದತ್ತಿ ಉಪನ್ಯಾಸ ಕಾರ್ಯಕ್ರಮದಲ್ಲಿ ತಾ.ಪಂ ಮಾಜಿ ಅಧ್ಯಕ್ಷ ಚನ್ನಪ್ಪ ಜಗಲಿ

# ಪ್ರತಿಯೊಬ್ಬ ವಿದ್ಯಾರ್ಥಿಗೂ ನಮ್ಮ ಪರಂಪರೆಗಳ ಬಗ್ಗೆ ಜ್ಞಾನವಿರಬೇಕು



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

"ಕನ್ನಡ ಭಾಷೆ, ಸಂಸ್ಕೃತಿ ಹಾಗೂ ಕನ್ನಡತನವನ್ನು ಶಾಲಾ ಕಾಲೇಜು ಹಂತದಿಂದಲೇ ವಿದ್ಯಾರ್ಥಿಗಳಲ್ಲಿ ಅಂತರ್ಗತಗೊಳಿಸಬೇಕು. ಈ ಹಿನ್ನೆಲೆ ಕಸಾಪ ಲಕ್ಷ್ಮೇಶ್ವರ ತಾಲೂಕ ಘಟಕ ಉತ್ತಮ ಕಾರ್ಯ ಮಾಡುತ್ತಿದೆ" ಎಂದು ತಾಪಂ ಮಾಜಿ ಸದಸ್ಯ ಚನ್ನಬಸಪ್ಪ ಜಗಲಿ ಅಭಿಪ್ರಾಯಪಟ್ಟರು.

ಅವರು ಲಕ್ಷ್ಮೇಶ್ವರದ ಸರಕಾರಿ ಪಪೂ ಕಾಲೇಜಿನಲ್ಲಿ ಕನ್ನಡ ಸಾಹಿತ್ಯ ಪರಿಷತ್ತು ಲಕ್ಷ್ಮೇಶ್ವರ ತಾಲೂಕ ಘಟಕ ಹಮ್ಮಿಕೊಂಡ ದತ್ತಿ ಉಪನ್ಯಾಸ ಕಾರ್ಯಕ್ರಮದಲ್ಲಿ ಕಸಾಪ ಕಾಲೇಜು ಘಟಕ ಉದ್ಘಾಟಿಸಿ ಮಾತನಾಡಿ. ಕನ್ನಡ ತಾಯಿಯ ಮಕ್ಕಳಾದ ಪ್ರತಿಯೊಬ್ಬ ವಿದ್ಯಾರ್ಥಿಗೂ ನಮ್ಮ ನೆಲ, ಜಲ, ಭಾಷೆ, ಸಂಸ್ಕೃತಿ, ಪರಂಪರೆಗಳ ಬಗ್ಗೆ ಜ್ಞಾನವಿರಬೇಕು. ಕನ್ನಡದ ಆಶಯಗಳು ಬದುಕಿನ ಸೂತ್ರಗಳಾಗಬೇಕು ಎಂದರು.

ದತ್ತಿ ದಾನಿ ಮಹೇಶ ಸೋಮಕ್ಕನವರ ಮಾತನಾಡಿ "ವಿದ್ಯಾರ್ಥಿಗಳು ವಿದ್ಯಾರ್ಜನೆಯ ಜತೆಗೆ ಕನ್ನಡ ಸಾಹಿತ್ಯ, ಸಂಸ್ಕತಿ ಅರಿತು ಬದುಕಿನಲ್ಲಿ ಅಳವಡಿಸಿಕೊಳ್ಳಬೇಕು. ಕನ್ನಡ ಸಾಹಿತ್ಯದ ಸೊಬಗನ್ನು ಹೆಚ್ಚಿಸುವ ಜನಪದವು ಶಿಷ್ಟ ಸಾಹಿತ್ಯದ ಬೇರಾಗಿದ್ದು ವಿದ್ಯಾರ್ಥಿಗಳಿಗೆ ಜನಪದ ಹಾಡು, ಆಚರಣೆ, ಪದ್ಧತಿಗಳ ಬಗ್ಗೆ ತಿಳಿದಿರಬೇಕು ಎಂದರು.

ಕಸಾಪ ಲಕ್ಷ್ಮೇಶ್ವರ ತಾಲೂಕ ಘಟಕದ ಅಧ್ಯಕ್ಷ ಈಶ್ವರ ಮೆಡ್ಲೇರಿ ಮಾತನಾಡಿ, ರಾಜ್ಯದಲ್ಲಿಯೇ ಪ್ರಥಮ ಪ್ರಯತ್ನವಾದ ಕಸಾಪ ಶಾಲಾ ಕಾಲೇಜು ಘಟಕ ಸ್ಥಾಪನೆ ಮಾಡಿ ಅವುಗಳಿಂದ ರಚನಾತ್ಮಕ ಕಾರ್ಯಕ್ರಮ ಹಮ್ಮಿಕೊಳ್ಳಲಾಗುತ್ತಿದೆ. ಇದು ಉತ್ತಮ ಫಲ ನೀಡುತ್ತಿದೆ" ಎಂದರು.

ಗಣ್ಯ ಉದ್ಯಮಿ ಶಿವಣ್ಣ ಕೋಳಿವಾಡ ಅವರ ದತ್ತಿಯ ವಿಷಯ 'ಜನಪದ ಸಾಹಿತ್ಯದಲ್ಲಿ ಮಹಿಳೆ' ಕುರಿತು ಪ್ರತಿಮಾ ಮಹಾಜನಶೆಟ್ಟರ ಉಪನ್ಯಾಸ ನೀಡಿದರು. ದಿ.ಫಕೀರಪ್ಪ ಪ. ಸೋಮಕ್ಕನವರ ಅವರ ದತ್ತಿಯ ವಿಷಯ 'ಬಸವ ವಿಚಾರಗಳ ಚಿಂತನ ಮಂಥನ' ಕುರಿತು ಸಾಹಿತಿ ಮೈತ್ರಾದೇವಿ ಹಿರೇಮಠ ಉಪನ್ಯಾಸ ನೀಡಿದರು. ಕಾಲೇಜಿನ ಪ್ರಾಚಾರ್ಯ ಕುಬೇರಪ್ಪ ಸಿದ್ರಾಮಣ್ಣವರ, ಕಾಲೇಜಿನ ಅಭಿವೃದ್ಧಿ ಸಮಿತಿಯ ಸದಸ್ಯ ಗಂಗಾಧರ ಮೆಣಸಿನಕಾಯಿ ಮಾತನಾಡಿದರು.

ಕ.ಸಾ.ಪ ಲಕ್ಷ್ಮೇಶ್ವರ ತಾಲೂಕು ಘಟಕದಿಂದ ಸರಕಾರಿ ಪಪೂ ಕಾಲೇಜು ಘಟಕದ ಪದಾಧಿಕಾರಿಗಳಿಗೆ ಪ್ರಮಾಣ ಪತ್ರ ವಿತರಿಸಲಾಯಿತು. ವೇದಿಕೆಯಲ್ಲಿ ದುಂಡೇಶ ಕೊಟಗಿ, ಉಪನ್ಯಾಸಕ ನಾಗಪ್ಪ ಸಾತಪುತೆ, ಭಾಗ್ಯಲಕ್ಷ್ಮಿ, ಎಸ್.ವಾಯ್.ಹೂಗಾರ, ಬಡಿಗೇರ, ರಾಜು ಜನಿವಾರದ ಉಪಸ್ಥಿತರಿದ್ದರು.

ಉಪನ್ಯಾಸಕರಾದ ಮಂಜುನಾಥ ಕೊಕ್ಕರಗುಂದಿ ಕ.ಸಾ.ಪ ಸಂಘಟನಾ ಕಾರ್ಯದರ್ಶಿ ನಾಗರಾಜ ಮಜ್ಜಿಗುಡ್ಡ, ಈರಣ್ಣ ಗಾಣಿಗೇರ ಘಟಕ, ಎನ್.ಪಿ. ಪ್ಯಾಟಿಗೌಡ್ರು ನಿರೂಪಿಸಿದರು.

# ತಾಲೂಕಾ ವಕೀಲರ ಸಂಘದ ನೂತನ ಪದಾಧಿಕಾರಿಗಳ ಆಯ್ಕೆ

■ವಿಜಯಸಾಕ್ಷಿ ಸುದ್ದಿ, ಮುಂಡರಗಿ

ದಿವಾಣಿ ಹಾಗೂ ಜೆಎಮ್‌ಎಫ್‌ಸಿ ನ್ಯಾಯಾಲಯದ ನ್ಯಾಯವಾದಿಗಳ ಸಂಘದ ನೂತನ ಅಧ್ಯಕ್ಷರಾಗಿ ಯು ಸಿ ಹಂಪಿಮಠ, ಉಪಾಧ್ಯಕ್ಷರಾಗಿ ಎಮ್ ಎಫ್ ಬನ್ನಿಕೊಪ್ಪ, ಪ್ರಧಾನ ಕಾರ್ಯದರ್ಶಿಯಾಗಿ ಪಿ ಎಸ್ ಕುಲಕರ್ಣಿ, ಸಹಕಾರ್ಯದರ್ಶಿಯಾಗಿ ಯು ಬಿ ಹಿರೇಗೌಡ್ರ, ಖಜಾಂಚಿಯಾಗಿ ಎಮ್ ಎಮ್ ನಾಡಗೌಡ್ರ, ಮಹಿಳಾ ಪ್ರತಿನಿಧಿಯಾಗಿ ಆರ್ ಎಮ್ ಗದಗ ಇವರನ್ನು ಎ ಕೆ ಜೈನ ವಕೀಲರು ಹಾಗೂ ಹಂಗಾಮಿ ಅಧ್ಯಕ್ಷರ ಸಮ್ಮುಖದಲ್ಲಿ ಆಯ್ಕೆ ಮಾಡಲಾಯಿತು.

ಈ ಸಂದರ್ಭದಲ್ಲಿ ಹಿರಿಯ ವಕೀಲರಾದ ಬಿ ಎಸ್ ಯರಾಶಿ, ಜಿ ಎಮ್ ಕುಲಕರ್ಣಿ, ಸಿ ಬಿ ಮಟ್ಟಿ, ಪಿ ಜಿ ಹಿರೇಮಠ, ಬಿ ಎಚ್ ರಾಟಿ, ಬಿ ವಿ ಹೆಗಡಾಳ, ಎಸ್ ಎ ಕುಲಕರ್ಣಿ, ಎಮ್ ಬಿ ಪಾಟೀಲ, ಎಮ್ ವಿ ಅರಳಿ, ಎಮ್ ಪಿ ಸೋನಾರ, ಎ ಸಿ ಉಳ್ಳಾಗಡ್ಡಿ, ಜೆ ಬಿ ಹಟ್ಟಿ, ಎಸ್ ಆಯ್ ಉಳ್ಳಾಗಡ್ಡಿ, ವೈ ಡಿ ಅಂಗಡಿ, ಆರ್ ಆರ್ ಗೋದ್ರಳ್ಳಿ, ಶಿವು ಬಿ ನಾಡಗೌಡ, ಹರ್ಷವರ್ಧನಗೌಡ, ಕೆ ಜಿ ಗಡಾದ, ಇ ಎಚ್ ಪಾಟೀಲ, ಬಿ ಎನ್ ಕುಂಬಾರ, ಎಸ್ ಎನ್ ಹಂದ್ರಾಳ, ನಾಗರಾಜ ಹರಪನಹಳ್ಳಿ, ಆರ್ ವಿ ದೊಡ್ಡಮನಿ, ಜಿ ಜಿ ಈಳಿಗೇರ, ಎಮ್ ಎನ್ ಬೆಳಗಟ್ಟಿ, ಒ ಸಿ ಲಿಂಗಶೆಟ್ಟರ, ಎಮ್ ಜಿ ಪಾಟೀಲ, ಜೆ ಆರ್ ಬೂದಿಹಾಳ, ಆಯ್ ಯು ಲೋದಿ, ಎಸ್ ಜಿ ಈಳಿಗೇರ, ಎಸ್ ಡಿ ಡೆಣ್ಣಿಕೇರಿ ಸೇರಿದಂತೆ ಸಂಘದ ಪದಾಧಿಕಾರಿಗಳು ಇದ್ದರು.

ಮಾರನಬಸರಿ ಗ್ರಾಮದಲ್ಲಿ ಪಿಎಸ್‌ಐ ನಿಖಿಲ್ ನೇತೃತ್ವದಲ್ಲಿ ಮೊಹರಂ ಶಾಂತಿ ಸಭೆ

# ಹಬ್ಬವನ್ನು ಸಹೋದರತೆಯಿಂದ ಆಚರಿಸಿ

■ವಿಜಯಸಾಕ್ಷಿ ಸುದ್ದಿ, ರೋಣ

ಭಾವೈಕ್ಯತೆಗೆ ಇಡೀ ಜಿಲ್ಲೆಗೆ ಮಾದರಿಯಾಗಿರುವ ಮಾರನಬಸರಿ ಗ್ರಾಮದಲ್ಲಿ ಸೌಹಾರ್ದತೆಯ ಮೊಹರಂ ಹಬ್ಬವನ್ನು ಸರ್ವ ಜನಾಂಗದವರು ಕೂಡಿಕೊಂಡು ಸಹೋದರತೆಯಿಂದ ಆಚರಿಸಬೇಕು ಎಂದು ನರೆಗಲ್ಲ ಠಾಣಾ ಪಿಎಸ್‌ಐ ನಿಖಿಲ್ ಹೇಳಿದರು.

ಅವರು ಶನಿವಾರ ಮಾರನಬಸರಿ ಗ್ರಾಮದ ಹಳೆಯ ಗ್ರಾ ಪಂ ಕಟ್ಟಡದ ಆವರಣದಲ್ಲಿ ಜರುಗಿದ ಶಾಂತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಮಾರನಬಸರಿ ಗ್ರಾಮದ ಜನರು ಏಕತೆ ಮತ್ತು ಒಗ್ಗಟ್ಟಿಗೆ ಹೆಸರಾಗಿದ್ದಾರೆ. ಗ್ರಾಮದಲ್ಲಿ ಎಲ್ಲ ಹಬ್ಬಗಳನ್ನು, ಜಾತ್ರೆಗಳನ್ನು ಎಲ್ಲರೂ ಸೇರಿಕೊಂಡು ಆಚರಿಸುತ್ತಾ ಬರುತ್ತಿರುವುದು ಹೆಮ್ಮೆಯ ಸಂಗತಿ. ಮುಂದಿನ ದಿನಗಳಲ್ಲಿಯೂ ಸಹ ಎಲ್ಲರೂ ಸೇರಿ ಮೊಹರಂ



ಹಬ್ಬವನ್ನು ಶಾಂತ ರೀತಿಯಿಂದ ಆಚರಿಸಬೇಕು ಎಂದರು.

ಮುಖಂಡ ಅಂದಪ್ಪ ಮರಡಿ ಮಾತನಾಡಿ, ಗ್ರಾಮದಲ್ಲಿ ನಾವೆಲ್ಲರೂ ಒಂದೇ ತಾಯಿಯ ಮಕ್ಕಳಂತೆ ಜೀವನವನ್ನು ಕಟ್ಟಿಕೊಂಡು ಬಂದವರು. ನಮ್ಮ ಪೂರ್ವಜರು ಸಹ ಎಲ್ಲ ಹಬ್ಬಗಳನ್ನು ಒಂದಾಗಿ ಆಚರಿಸಿಕೊಂಡು ಬಂದಿದ್ದು, ನಾವು ಅವರ ಮಾರ್ಗದರ್ಶನದಲ್ಲಿ ನಡೆಯುತ್ತಿದ್ದೇವೆ. ಇಲಾಖೆಗೆ ಸಂಪೂರ್ಣ ಸಹಕಾರ ನೀಡುವುದಾಗಿ

> ಗ್ರಾಮದಲ್ಲಿ ಜರುಗುವ ಮೊಹರಂ ಹಬ್ಬಕ್ಕೆ ಸಾವಿರಾರು ಭಕ್ತರು ಆಗಮಿಸುತ್ತಾರೆ. ಈ ಹಿನ್ನೆಲೆಯಲ್ಲಿ ಶಾಂತತೆಯ ವಾತಾವರಣಕ್ಕೆ ಯಾರಾದರೂ ಧಕ್ಕೆ ತರುವ ರೀತಿಯಲ್ಲಿ ನಡೆದುಕೊಂಡರೆ ಅಂಥವರ ವಿರುದ್ಧ ಕಠಿಣ ಕ್ರಮಗಳನ್ನು ತೆಗೆದುಕೊಳ್ಳಲು ಹಿಂಜರಿಯುವುದಿಲ್ಲ. ಎಲ್ಲರೂ ಇಲಾಖೆಯೊಂದಿಗೆ ಸಹಕರಿಸಬೇಕು. ಹಬ್ಬದ ಸಂದರ್ಭದಲ್ಲಿ ಸಂಚಾರಕ್ಕೆ ತೊಂದರೆಯಾಗದಂತೆ ಅಗತ್ಯ ಕ್ರಮಗಳನ್ನು ತೆಗೆದುಕೊಳ್ಳಲಾಗುವುದು.
>
> **– ನಿಖಿಲ್,** ನರೇಗಲ್ಲ ಠಾಣಾ ಪಿಎಸ್‌ಐ.

ತಿಳಿಸಿದ ಅವರು, ಜುಲೈ 27ರಂದು ಸಂದಲ್ ರಾತ್ರಿ, ಜುಲೈ 28ರಂದು ಕತ್ತಲ್ ರಾತ್ರಿ, ಜುಲೈ 29ರಂದು ದೇವರು ಹೊಳಿಗೆ ಹೊಗುವ ದಿನವಾಗಿದ್ದು, ಈ ಮೂರೂ ದಿನಗಳ ಕಾಲ ಭಕ್ತರ ಸಂಖ್ಯೆ ಅಧಿಕವಾಗಿರುತ್ತದೆ ಎಂದು ಸಭೆಯಲ್ಲಿ ವಿವರಿಸಿದರು.

ಗ್ರಾ ಪಂ ಅಧ್ಯಕ್ಷೆ ಫಾತೀಮಾ ಸವಡಿ, ಉಪಾಧ್ಯಕ್ಷ ಶಿವಕುಮಾರ ದಿಂಡೂರ, ಸದಸ್ಯರಾದ ಈರಪ್ಪ ನಿಡಗುಂದಿ, ವೀರಣ್ಣ ಮರಡಿ, ಅಲ್ಲಾಸಾಬ ಮೋತೆಖಾನ್, ದಿಲ್‌ಶ್ಯಾದಬೇಗಂ ದೋಟಿಹಾಳ, ಹನಮವ್ವ ತಳವಾರ, ಮಂಜುಳಾ ಮಾದರ, ಮುಖಂಡರಾದ ಶೇಖರಗೌಡ ಪಾಟೀಲ, ಶ್ರೀಶೈಲ್ ಶಾಂತಗೀರಮಠ, ಶರಣಪ್ಪ ಹುದ್ದಾರ, ಖಾದಿರಸಾಬ ಕಳಕಾಪೂರ, ಮರ್ತುಜಸಾಬಮೋತೆಖಾನ್, ಅಡಿವೆಪ್ಪ ಜಿಗಳೂರ, ಪಿಡಿಒ ಎಸ್ ಆರ್ ಸಂಕನೂರ ಸೇರಿದಂತೆ ಗ್ರಾ ಪಂ ಸಿಬ್ಬಂದಿಗಳು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

ಎನ್‌ಎಸ್‌ಎಸ್ ನಾಯಕತ್ವ ತರಬೇತಿ ಶಿಬಿರದಲ್ಲಿ ಜಯಶ್ರೀ ಭಂಡಾರಿ ಕರೆ

# ನಾಯಕತ್ವ ಗುಣದೊಂದಿಗೆ ಸಮಾಜ ಸೇವೆಗೆ ಮುಂದಾಗಿ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ನೀವೆಲ್ಲರೂ ಪಾಲ್ಗೊಂಡಿರುವ ನಾಯಕತ್ವ ತರಬೇತಿ ಶಿಬಿರದಿಂದ ನಾಯಕತ್ವದ ಗುಣಗಳನ್ನು ಚೆನ್ನಾಗಿ ಬೆಳೆಸಿಕೊಳ್ಳಿ. ಎನ್‌ಎಸ್‌ಎಸ್‌ನ ಮೂಲ ಗುರಿ ಸೇವೆ ಮತ್ತು ಸಮಾಜ ಸುಧಾರಣೆಯಾಗಿದೆ. ಆದ್ದರಿಂದ ನೀವೆಲ್ಲರೂ ಸೇವೆಗೂ ಮುಂದಾಗಿ ನಿಮ್ಮ ಜೀವನವನ್ನು ಸಾರ್ಥಕಪಡಿಸಿಕೊಳ್ಳಿ ಎಂದು ಬಾದಾಮಿಯ ಸಾಹಿತಿ ಜಯಶ್ರೀ ಭಂಡಾರಿ ಹೇಳಿದರು.

ನರೇಗಲ್ಲದ ಶ್ರೀ ಅನ್ನದಾನೇಶ್ವರ ಪದವಿ ಮಹಾವಿದ್ಯಾಲಯದಲ್ಲಿ ನಡೆದಿರುವ ಎನ್‌ಎಸ್‌ಎಸ್ ನಾಯಕತ್ವ ತರಬೇತಿ ಶಿಬಿರದಲ್ಲಿ ಅವರು ಶುಕ್ರವಾರ ನಡೆದ ಕಾರ್ಯಕ್ರಮದಲ್ಲಿ ಮಾತನಾಡಿದರು.

ಸಮಾಜದಲ್ಲಿ ಸೇವೆಗೆ ಸಾಕಷ್ಟು ಅವಕಾಶಗಳಿವೆ. ಅವುಗಳನ್ನು



> ಈ ಶಿಬಿರವು ನಿಮ್ಮನ್ನು ದೇಶಕ್ಕೆ ಯೋಗ್ಯರಾದ ವ್ಯಕ್ತಿಯನ್ನಾಗಿ ತಯಾರು ಮಾಡುತ್ತದೆ. ಅನ್ಯಾಯಗಳನ್ನು ಕಂಡಾಗ ನೀವು ಸಿಡಿದೇಳುವ ಗುಣಗಳನ್ನು ಬೆಳೆಸಿಕೊಳ್ಳಬೇಕು. ಈ ನಾಡಿಗೆ ನಿಮ್ಮದೇ ಆದ ಕೊಡುಗೆಯನ್ನು ನೀವು ನೀಡಲು ಮುಂದಾಗಬೇಕು. ಅದಕ್ಕೆ ಸ್ವಾಮಿ ವಿವೇಕಾನಂದರಂತೆ, ಅಬ್ದುಲ್ ಕಲಾಂರಂತೆ, ಕಿರಣ್ ಬೇಡಿಯಂತೆ, ರವಿ ಚೆನ್ನಣ್ಣನವರಂತೆ ದಕ್ಷ ವ್ಯಕ್ತಿಗಳಾಗಿ ಸಮಾಜ ಸೇವೆಗೆ ಮುಂದಾಗಬೇಕು.
>
> **– ಶಾರದಾ ಮೇಟಿ.** ನಿವೃತ್ತ ಉಪನ್ಯಾಸಕಿ.

ಸಮರ್ಪಕವಾಗಿ ಬಳಸಿಕೊಳ್ಳಬೇಕು. ಆಗಲೇ ಅವಕಾಶಗಳು ನಿಮ್ಮನ್ನು ಹುಡುಕಿಕೊಂಡು ಬರುತ್ತವೆ. ಆದರೆ ಅವುಗಳನ್ನು ಅದೃಷ್ಟಗಳನ್ನಾಗಿ ಪರಿವರ್ತಿಸುವ ಕೌಶಲ್ಯ ನಿಮ್ಮಲ್ಲೇ ಇದೆ. ಹಾಗಾದಾಗ ಮಾತ್ರ ನಿಮ್ಮ ಜೀವನದಲ್ಲಿ ಅತ್ಯಂತ ಎತ್ತರದ ಹಂತಕ್ಕೆ ಹೋಗುತ್ತೀರಿ ಎಂದು ಕಿವಿಮಾತು ಹೇಳಿದರು.

ನಿವೃತ್ತ ಉಪನ್ಯಾಸಕಿ ಕವಿತಾ ಕಾಶಪ್ಪನವರ ಮಾತನಾಡಿ, ಎನ್‌ಎಸ್‌ಎಸ್‌ನಿಂದ ನಿಮ್ಮಲ್ಲಿ ಮಾನವೀಯ ಗುಣಗಳ ಜೊತೆ–ಗೆ ನಾಯಕತ್ವದ ಗುಣಗಳೂ ಬೆಳೆಯುತ್ತವೆ.

ಇಂದು ನಾವು ಆಧುನಿಕ ತಂತ್ರಜ್ಞಾದ ಯುಗದಲ್ಲಿ ಇದ್ದೇವೆ. ನಿತ್ಯವೂ ಹೊಸ ಹೊಸ ಆವಿಷ್ಕಾರಗಳಾಗುತ್ತವೆ. ಇವುಗಳ ಬಗ್ಗೆ ಸರಿಯಾಗಿ ತಿಳಿದುಕೊಂಡು ಇತರರಿಗೂ ಅವುಗಳನ್ನು ಬಳಸುವ ಬಗೆ ಹೇಗೆ ಎಂಬುದರ ಬಗ್ಗೆ ನೀವು ತಿಳಿಸಿಕೊಡಬೇಕು ಎಂದರು.

ಸಂಸ್ಥೆಯ ಆಡಳಿತಾಧಿಕಾರಿ ಎನ್ ಆರ್ ಗೌಡರ ಅಧ್ಯಕ್ಷತೆ ವಹಿಸಿದ್ದರು. ವೇದಿಕೆಯ ಮೇಲೆ ಮಲ್ಲಿಕಾರ್ಜುನಪ್ಪ ಮೆಣಸಗಿ, ಕಾರ್ಯಕ್ರಮಾಧಿಕಾರಿ ಡಾ. ಕಲ್ಲಯ್ಯ ಹಿರೇಮಠ, ಡಾ. ರತ್ನಾ ಪಾಟೀಲ, ಜಿಮಖಾನ ಚೇರಮನ್ ಡಾ. ಡಿ ಎಲ್ ಪವಾರ, ಸಿಬ್ಬಂದಿಗಳು ಉಪಸ್ಥಿತರಿದ್ದರು.


ಬಿ.ಜಿ.ಅಣ್ಣಿಗೇರಿ ಗುರುಗಳ ಜಯಂತಿ

# ಪ್ರತಿಭಾ ಪುರಸ್ಕಾರ ಸಮಾರಂಭ ಇಂದು

■ವಿಜಯಸಾಕ್ಷಿ ಸುದ್ದಿ, ಗದಗ

ಗದುಗಿನ ಬಿ.ಜಿ.ಅಣ್ಣಿಗೇರಿ ಗುರುಗಳ ಪ್ರತಿಭಾ ಪ್ರತಿಷ್ಠಾನವು ಲಿಂ.ಬಿ.ಜಿ.ಅಣ್ಣಿಗೇರಿ ಗುರುಗಳ 93ನೇ ಜಯಂತ್ಯುತ್ಸವ ಹಾಗೂ 9ನೇ ವರ್ಷದ ಪ್ರತಿಭಾ ಪುರಸ್ಕಾರ ಸಮಾರಂಭವನ್ನು ಜು. 23 ರಂದು ರವಿವಾರ ಮುಂಜಾನೆ 10–30 ಗಂಟೆಗೆ ಗದುಗಿನ ತೋಂಟದಾರ್ಯ ಮಠದ ಅನುಭವ ಮಂಟಪದಲ್ಲಿ ಏರ್ಪಡಿಸಿದೆ.

ಜ.ಡಾ.ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ಸಾನಿಧ್ಯ ವಹಿಸುವರು. ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ.ಪಾಟೀಲರು ಉದ್ಘಾಟಿಸುವರು. ಮುಖ್ಯ ಅತಿಥಿಗಳಾಗಿ ಮಾಜಿ ಶಾಸಕ



ಡಿ.ಆರ್.ಪಾಟೀಲ, ಡಿಡಿಪಿಐ ಬಸವಲಿಂಗಪ್ಪ, ಪ್ರೊ.ಎಸ್. ಯು.ಸಜ್ಜನಶೆಟ್ಟರ ಆಗಮಿಸುವರು. ಅಧ್ಯಕ್ಷತೆಯನ್ನು ಪ್ರತಿಷ್ಠಾನದ ಅಧ್ಯಕ್ಷ ಶಿವಕುಮಾರ ಎಚ್. ಪಾಟೀಲ ವಹಿಸುವರು.

ಪ್ರತಿಷ್ಠಾನದ ಉಪಾಧ್ಯಕ್ಷ ಶಂಕ್ರಪ್ಪ ಅಣ್ಣಿಗೇರಿ, ಕಾರ್ಯದರ್ಶಿ ಶಿವಪ್ಪ ಕತ್ತಿ, ಖಜಾಂಚಿ ಎಸ್. ಆರ್.ಪಾಟೀಲ, ನಿರ್ದೇಶಕರಾದ ಶಿವಾನಂದ ದಂಡಿನ, ವಿರುಪಾಕ್ಷಪ್ಪ ಮ್ಯಾಗೇರಿ, ಚನ್ನಪ್ಪ ಮಲ್ಲಾಡದ, ತೋಂಟೇಶ ವೀರಲಿಂಗಯ್ಯನಮಠ, ವಿರುಪಾಕ್ಷಪ್ಪ ಶಾಂತಗೇರಿ, ಕಳಕಪ್ಪ ಕುರ್ತಕೋಟಿ ಅಲ್ಲದೆ ಬಸವರಾಜ ಬಿಂಗಿ, ಸಿದ್ದಣ್ಣ ಕವಲೂರ, ಡಾ.ಬಸವರಾಜ ಚನ್ನಪ್ಪಗೌಡ್ರ, ಶಶಿಧರ ದಿಂಡೂರ ಉಪಸ್ಥಿತರಿರುವರು.

ಪ್ರತಿಷ್ಠಾನದ ಕಾರ್ಯದರ್ಶಿ ಶಿವಪ್ಪ ಕತ್ತಿ ಸರ್ವರಿಗೂ ಸ್ವಾಗತ ಕೋರಿದ್ದಾರೆ

# ಕಾನೂನು ಅರಿವು ನೆರವು ಕಾರ್ಯಕ್ರಮ



■ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ಇಲ್ಲಿನ ಹೊಸೂರಿನ ಸರ್ಕಾರಿ ಪ್ರೌಢಶಾಲೆಯಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಧಾರವಾಡ, ತಾಲೂಕು ಕಾನೂನು ಸೇವಾ ಸಮಿತಿ ಹುಬ್ಬಳ್ಳಿ, ಜಿ. ಕೆ. ಕಾನೂನು ಮಹಾವಿದ್ಯಾಲಯ, ಸರ್ಕಾರಿ ಪ್ರೌಢ ಶಾಲೆ ಹೊಸೂರು ಹಾಗೂ ವಾರ್ತಾ ಇಲಾಖೆ ಇವುಗಳ ಸಂಯುಕ್ತಾಶ್ರಯದಲ್ಲಿ ಮಕ್ಕಳ ಹಕ್ಕುಗಳು ಹಾಗೂ ಫೋಕ್ಸೋ ಕಾಯಿದೆ ಬಗ್ಗೆ ಕಾನೂನು ಅರಿವು–ನೆರವು ಕಾರ್ಯಕ್ರಮ ಜರುಗಿತು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ಪರಶುರಾಮ ದೊಡ್ಡಮನಿ ಅವರು ಮಕ್ಕಳ ಹಕ್ಕುಗಳು ಹಾಗೂ ಫೋಕ್ಸೋ ಕಾಯ್ದೆ ಬಗ್ಗೆ ಸವಿವರವಾಗಿ ಮಾತನಾಡಿದರು.

ಸರ್ಕಾರಿ ಪ್ರೌಢಶಾಲೆಯ ಮುಖ್ಯೋಪಾಧ್ಯಾಯಿನಿ ಜಿ. ಸಿ. ಕೋಲಕಾರ ಅಧ್ಯಕ್ಷತೆ ವಹಿಸಿದ್ದರು.

ತಾಲೂಕು ಕಾನೂನು ಸೇವಾ ಸಮಿತಿಯ ಸದಸ್ಯ ಕಾರ್ಯದರ್ಶಿ ಹಾಗೂ ಪ್ರಧಾನ ದಿವಾಣಿ ನ್ಯಾಯಾಧೀಶರಾದ ರಾಜಶೇಖರ ತಿಳಗಂಜಿ, ಜಿ.ಕೆ. ಕಾನೂನು ಮಹಾವಿದ್ಯಾಲಯದ ಸಹಾಯಕ ಪ್ರಾಧ್ಯಾಪಕರಾದ ಸ್ವಪ್ನ ಸೋಮಯಾಜಿ ಸೇರಿದಂತೆ ಶಿಕ್ಷಕರು, ವಿದ್ಯಾರ್ಥಿಗಳು ಭಾಗವಹಿಸಿದ್ದರು.

ತಿಮ್ಮಾಪೂರ ಗ್ರಾಮದಲ್ಲಿ ಗೃಹಲಕ್ಷ್ಮೀ ಯೋಜನೆ ನೋಂದಣಿ ಕಾರ್ಯಕ್ಕೆ ಚಾಲನೆ

# ಸರ್ಕಾರ ಕೊಟ್ಟ ಮಾತನ್ನು ಉಳಿಸಿಕೊಳ್ಳಲಿದೆ



■ವಿಜಯಸಾಕ್ಷಿ ಸುದ್ದಿ, ಗದಗ

ಮಹಿಳೆಯರನ್ನು ಆರ್ಥಿಕವಾಗಿ ಸಶಕ್ತರನ್ನಾಗಿ ಮಾಡುವ ಉದ್ದೇಶದಿಂದ ರಾಜ್ಯ ಸರ್ಕಾರದ ಪ್ರಮುಖ 5 ಗ್ಯಾರಂಟಿ ಯೋಜನೆಗಳಲ್ಲಿ ಒಂದಾದ ಮಾಸಿಕ 2000 ರೂ. ಒದಗಿಸುವ ಗೃಹಲಕ್ಷ್ಮೀ ಯೋಜನೆಯ ನೋಂದಣಿ ಪ್ರಕ್ರಿಯೆ ಪ್ರಾರಂಭವಾಗಿದ್ದು, ಅರ್ಹ ಫಲಾನುಭವಿಗಳು ಈ ಯೋಜನೆಯ ಲಾಭ ಪಡೆಯಬೇಕು ಎಂದು ಕಾಂಗ್ರೆಸ್ ಪಕ್ಷದ ಮುಖಂಡ ಹಾಗೂ ಕರ್ನಾಟಕ ರಾಜ್ಯ ರೈತ ಸಂಘದ ಗದಗ ಜಿಲ್ಲಾಧ್ಯಕ್ಷ ಯಲ್ಲಪ್ಪ ಎಚ್ ಬಾಬರಿ ಹೇಳಿದರು.

ಅವರು ತಾಲೂಕಿನ ತಿಮ್ಮಾಪೂರ ಗ್ರಾಮದ ಗ್ರಾಮ ಒನ್ ನಾಗರಿಕ ಸೇವಾ

> ಗೃಹಲಕ್ಷ್ಮೀ ಸೌಲಭ್ಯ ಸಿಗುತ್ತೋ ಇಲ್ಲವೋ ಎಂದು ಸಾರ್ವಜನಿಕರು ಆತಂಕಪಡುವ ಅಗತ್ಯವಿಲ್ಲ. ಸರ್ಕಾರ ಕೊಟ್ಟ ಮಾತನ್ನು ಉಳಿಸಿಕೊಳ್ಳಲಿದೆ. ಯೋಜನೆಯನ್ನು ಜಾರಿಗೆ ತಂದೇ ತರುತ್ತೇವೆ. ಅರ್ಜಿ ಸಲ್ಲಿಸಲು ನೂಕು ನುಗ್ಗಲಿನಲ್ಲಿ ತೆರಳುವ ಅವಶ್ಯಕತೆಯಿಲ್ಲ. ಆಗಸ್ಟ್ ತಿಂಗಳಿನಿಂದ ನಿಮ್ಮ ಬ್ಯಾಂಕ್ ಖಾತೆಗೆ ಹಣ ಜಮಾವಣೆಯಾಗುತ್ತದೆ. ಆದರೆ ನೀವು ಕಡ್ಡಾಯವಾಗಿ ಅರ್ಜಿ ಸಲ್ಲಿಸಬೇಕು. ಈಗಾಗಲೇ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಸಚಿವರು ಇಲಾಖೆಯ ಅಧಿಕಾರಿಗಳಿಗೆ ಎಲ್ಲಾ ಮಾಹಿತಿ ನೀಡಿದ್ದಾರೆ. ತಪ್ಪದೇ ಅರ್ಜಿ ಸಲ್ಲಿಸಿ.
>
> **– ಯಲ್ಲಪ್ಪ ಎಚ್ ಬಾಬರಿ.** ಕಾಂಗ್ರೆಸ್ ಪಕ್ಷದ ಮುಖಂಡರು.

ಕೇಂದ್ರ, ಬಾಪೂಜಿ ಸೇವಾ ಕೇಂದ್ರ ಮತ್ತು ಪ್ರಜಾಪ್ರತಿನಿಧಿಗಳ ಸ್ವಯಂ ಸೇವಕರ ಮೂಲಕ ರಾಜ್ಯ ಸರ್ಕಾರದ ಗೃಹಲಕ್ಷ್ಮೀ ಯೋಜನೆಯ ನೋಂದಣಿಗೆ ಅರ್ಜಿ ಸಲ್ಲಿಸುವ ಕಾರ್ಯಕ್ಕೆ ಚಾಲನೆ ನೀಡಿ ಮಾತನಾಡಿದರು.

ಈಗಾಗಲೇ ಮುಖ್ಯಮಂತ್ರಿ ಸಿದ್ದರಾಮಯ್ಯನವರ ನೇತೃತ್ವದ ಕಾಂಗ್ರೆಸ್ ಸರ್ಕಾರ ಮನೆಯ ಯಜಮಾನಿಗೆ ತಿಂಗಳಿಗೆ 2000 ರೂ. ಒದಗಿಸಲು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯಿಂದ ಆದೇಶ ಹೊರಡಿಸಿದೆ. ನಿಗದಿತ ದಾಖಲೆಗಳೊಂದಿಗೆ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ. ಮೊದಲ ದಿನವೇ ಗದಗ ಜಿಲ್ಲೆಯಲ್ಲಿ ಸಾರ್ವಜನಿಕರಿಂದ ಉತ್ತಮ ಸ್ಪಂದನೆ ಬಂದಿದ್ದು, ಹೆಚ್ಚಿನ ಮಹಿಳೆಯರು ಅರ್ಜಿ ಸಲ್ಲಿಕೆಯಲ್ಲಿ ತೆ–ಡಗಿಕೊಂಡಿದ್ದಾರೆ ಎಂದು ಹೇಳಿದರು.

ಅರ್ಜಿ ಸಲ್ಲಿಸಿದ ಸ್ವೀಕೃತಿ ಪ್ರತಿಗಳನ್ನು ಕಾಂಗ್ರೆಸ್ ಪಕ್ಷದ ಮುಖಂಡರು ಮಹಿಳೆಯರಿಗೆ ವಿತರಿಸಿದರು. ಈ ಸಂದರ್ಭದಲ್ಲಿ ಹುಚ್ಚೀರಪ್ಪ ಜೋಗಿನ, ಶರಣಪ್ಪ ಜೋಗಿನ, ಗಿರೀಶ ಗುಡ್ಲಾನೂರ, ಸಂಗಪ್ಪ ಮಳ್ಳಿ, ಮಲ್ಲಿಕಾರ್ಜುನ ಇದ್ಲಿ, ತಿರುಕಪ್ಪ ಕುಂಬಾರ, ರಾಮಪ್ಪ ಹಚ್ಚಪ್ಪನವರ, ರಾಮಣ್ಣ ಖಂಡ್ರಿ, ರಾಮಣ್ಣ ಕಂಕರಿ, ಹನುಮವ್ವ ತಳವಾರ, ಗೀತಾ ಕಮ್ಮಾರ, ರತ್ನವ್ವ ಆಲೂರು, ಗ್ರಾಮ ಒನ್ ನಾಗರಿಕ ಸೇವಾ ಕೇಂದ್ರದ ಸಿಬ್ಬಂದಿ ಮಲ್ಲಪ್ಪ ಕೋಮಲಾಪೂರ ಹಾಗೂ ಕಾಂಗ್ರೆಸ್ ಪಕ್ಷದ ಮುಖಂಡರು ಪಾಲ್ಗೊಂಡಿದ್ದರು.

## ನಿಧನ ವಾರ್ತೆ

### ಪಾರ್ವತಿಬಾಯಿ ಹಬೀಬ



**ಗದಗ:** ನಗರದ ದಾಸರ ಓಣಿಯ ವಿಠ್ಠಲ ಮಂದಿರ ದೇವಸ್ಥಾನದ ಹತ್ತಿರದ ನಿವಾಸಿ ಪಾರ್ವತಿಬಾಯಿ ಲಕ್ಷ್ಮಣಸಾ ಹಬೀಬ(63) ಶನಿವಾರ ಬೆಳಿಗ್ಗೆ 10.30ಕ್ಕೆ ನಿಧನರಾದರು. ಮೃತರ ಅಂತಿಮಯಾತ್ರೆ ಶನಿವಾರ ಸಾಂಯಕಾಲ 5 ಗಂಟೆಗೆ ಜರುಗಿತು. ಮೃತರು ಪತಿ ಲಕ್ಷ್ಮಣಸಾ ಡೊಂಗರಸಾ ಹಬೀಬ, ಮೂವರು ಪುತ್ರರು, ಓರ್ವ ಪುತ್ರಿ, ಮೊಮ್ಮಕ್ಕಳು ಸೇರಿದಂತೆ ಅಪಾರ ಬಂಧು–ಬಳಗವನ್ನು ಅಗಲಿದ್ದಾರೆ.

ಮೃತರ ನಿಧನಕ್ಕೆ ದಾಸರ ಓಣಿಯ ವಿಠ್ಠಲ ಮಂದಿರ ಟ್ರಸ್ಟ್ ಕಮಿಟಿ, ದುರ್ಗಾದೇವಿ ದೇವಸ್ಥಾನದ ಟ್ರಸ್ಟ್ ಕಮಿಟಿ ಪದಾಧಿಕಾರಿಗಳು, ಎಸ್‌ಎಸ್‌ಕೆ ಸಮಾಜ ಬಾಂಧವರು ಸಂತಾಪ ವ್ಯಕ್ತಪಡಿಸಿದ್ದಾರೆ.

### ಶಾಂತವ್ವ ಕೃಷ್ಣಪ್ಪ ಮಡಿವಾಳರ



**ಗದಗ:** ಇಲ್ಲಿನ ಜವಳ ಗಲ್ಲಿಯ ನಿವಾಸಿ (ಕರ್ನಾಟಕ ಆಯಿಲ್ ಮಿಲ್ ಹತ್ತಿರ) ಶ್ರೀಮತಿ ಶಾಂತವ್ವ ಕೃಷ್ಣಪ್ಪ ಮಡಿವಾಳರ(58) ಶನಿವಾರ ಮಧ್ಯಾಹ್ನ ನಿಧನರಾದರು. ಮೃತರು ಪತಿ, ಇಬ್ಬರು ಪುತ್ರರು, ಇಬ್ಬರು ಪುತ್ರಿಯರು ಹಾಗೂ ಅಪಾರ ಬಂಧು–ಬಳಗವನ್ನು ಅಗಲಿದ್ದಾರೆ. ಮೃತರ ಅಂತ್ಯಕ್ರಿಯೆಯು ರವಿವಾರ ಮುಂಜಾನೆ 10 ಗಂಟೆಗೆ ನಡೆಯಲಿದೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka